MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 237 | ಶುಕ್ರವಾರ : 04–07–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 237 | FRIDAY : 04–07–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕೈ ಸರ್ಕಾರದಿಂದ ಪೊಲೀಸ್ ಇಲಾಖೆಗೆ ಧಕ್ಕೆ :ಆರ್.ಅಶೋಕ್



**ಬೆಂಗಳೂರು, ಜು. 3–** ರಾಜ್ಯದ ಕಾಂಗ್ರೆಸ್ ಸರ್ಕಾರದಿಂದ ಪೊಲೀಸ್ ಇಲಾಖೆಯ ಮನೋಬಲಕ್ಕೆ ಧಕ್ಕೆ ಬಂದಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದಿದ್ದ ಕಾಂಗ್ರೆಸ್ ಪಕ್ಷದ ಸಮಾವೇಶದ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ವೇದಿಕೆಯಲ್ಲೇ ಅಪಮಾನಕ್ಕೀಡಾದ ಧಾರವಾಡ ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಭರಮನಿ ಅವರು ಸ್ವಯಂ ನಿವೃತ್ತಿ ಕೋರಿ ಅರ್ಜಿ ಸಲ್ಲಿಸಿರುವುದನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಸಾಪಿಸಿ ಮುಖ್ಯಮಂತ್ರಿ ಸಿದ್ಧರಾಮಯ್ಯ ವಿರುದ್ಧ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದು, ಹೆಚ್ಚುವರಿ ಎಸ್‌ಪಿ ಮೇಲೆ ನೀವು ಬಹಿರಂಗ ವೇದಿಕೆ ಮೇಲೆ ಕೈಎತ್ತಿದ ಘಟನೆಗೆ ಕಾರಣ ನಿಮ್ಮ ಅಧಿಕಾರದ ದರ್ಪವೋ, ಮದವೋ, ದುರಂಹಕಾರವೋ, ವಿಫಲ ಸರ್ಕಾರ ಮುನ್ನಡೆಸುತ್ತಿರುವ ಹತಾಶೆಯೋ ಅಥವಾ ಇಷ್ಟರಲ್ಲೇ ಅಧಿಕಾರ ಬಿಟ್ಟುಕೊಡಬೇಕು ಎನ್ನುವ ಕಳವಳವೋ ಅದನ್ನು ನಿಮ್ಮ ಆತ್ಮಾವಲೋಕನಕ್ಕೆ ಬಿಡುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ನಿಮ್ಮ ನಡೆಯಿಂದ ಒಬ್ಬ ಕರ್ತವ್ಯ ನಿಷ್ಠ ಅಧಿಕಾರಿಯ ಸ್ವಾಭಿಮಾನಕ್ಕೆ ಧಕ್ಕೆ (2ನೇಪುಟಕ್ಕೆ)

## ಡಿಕೆಶಿ ಹೇಳಿಕೆ ಹಿಂದೆ ಅಸಹಾಯಕತೆ ಇಲ್ಲ

**ಬೆಂಗಳೂರು,ಜು.3–**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಂಬಲಿಸುವುದನ್ನು ಬಿಟ್ಟು ನಮಗೆ ಬೇರೆ ಆಯ್ಕೆ ಇಲ್ಲ ಎಂಬ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆ ಹಿಂದೆ ಅಸಹಾಯಕತೆ ಇಲ್ಲ. ಪಕ್ಷ ಹಾಗೂ ನಾಯಕತ್ವಕ್ಕೆ ಗೌರವ ಕೊಟ್ಟು ಅವರು ಈ ರೀತಿ ಮಾತನಾಡಿದ್ದಾರೆ ಎಂದು ಮಾಜಿ ಸಂಸದ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಹೋದರರೂ ಆಗಿರುವ ಡಿ.ಕೆ ಸುರೇಶ್ ಹೇಳಿದ್ದಾರೆ.

ಜನರು ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ಕೊಟ್ಟಿದ್ದಾರೆ. ನಾವು ಜನರ ಹಿತವನ್ನು ಕಾಪಾ



ಡಬೇಕು. ಡಿ.ಕೆ ಶಿವಕುಮಾರ್, ಸಿದ್ದರಾಮಯ್ಯ ಇವತ್ತೂ ಚೆನ್ನಾಗಿದ್ದಾರೆ. ನಾಳೆಯೂ ಚೆನ್ನಾಗಿರುತ್ತಾರೆ. ಶಾಸಕ, ಸಿಎಂ ಆಗಬೇಕು ಎಂದರೆ ಅದು ಹಣೆಬರಹದಲ್ಲಿ ಬರೆದಿರಬೇಕು ಎಂದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಬೇಕು ಎಂಬ ಆಸೆ ನನಗೂ ಇದೆ. ನಮಗೂ ಈಗಲೂ ಭರವಸೆ ಇದೆ. ನಾಳೆಯೂ ಇರಲಿದೆ. ಎಂದಾದರು ಒಂದು ದಿನ ಡಿ.ಕೆ ಶಿವಕುಮಾರ್ ಅವರ ಶ್ರಮಕ್ಕೆ ಫಲ ಸಿಗುತ್ತದೆ, ಯಾವಾಗ ಫಲ ಎಂಬುದನ್ನು ಹೈಕಮಾಂಡ್ ತೀರ್ಮಾನಿಸು ತ್ತದೆ ಎಂದು ಮಾರ್ಮಿಕವಾಗಿ ಹೇಳಿದರು.

ಇನ್ನೂ 5 ವರ್ಷ ನಾನೇ ಮುಖ್ಯಮಂತ್ರಿ ಎಂಬ ಸಿದ್ದರಾಮಯ್ಯ ಹೇಳಿಕೆಯಲ್ಲಿ ತಪ್ಪೇನಿದೆ. ಅವರು ಮುಖ್ಯಮಂತ್ರಿಯಾಗಿದ್ದಾರೆ. ಹೀಗಿರುವಾಗ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತೇನೆ ಎನ್ನುವುದು ತಪ್ಪೇನಲ್ಲ. ಶಾಸಕಾಂಗ ಪಕ್ಷದಲ್ಲಿ ಅವರನ್ನು ನಾಯಕರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಡಿ.ಕೆ ಸುರೇಶ್ ಸಮರ್ಥಿಸಿ ಕೊಂಡರು.ಡಿ.ಕೆ ಶಿವಕುಮಾರ್ ಅವರು ಕಾಂಗ್ರೆಸ್ ಪಕ್ಷದ(2ನೇಪುಟಕ್ಕೆ)

## ಆಗಸ್ಟ್‌ನಲ್ಲಿ ರಾಯಚೂರಲ್ಲಿ ಸೇನಾ ನೇಮಕಾತಿ ರ್‍ಯಾಲಿ: ಸಹಕಾರ ನೀಡಲು ಅಧಿಕಾರಿಗಳಿಗೆ ಸಲಹೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.3–** ಭಾರತೀಯ ಸೇನೆಯಲ್ಲಿನ ವಿವಿಧ ಹುದ್ದೆಗಳ ಭರ್ತಿಗಾಗಿ ಆಗಸ್ಟ್ 08 ರಿಂದ ಆಗಸ್ಟ್ 22ರವರೆಗೆ ಜಿಲ್ಲೆಯಲ್ಲಿ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಗೆ ಜಿಲ್ಲೆಯ ಎಲ್ಲಾ ಇಲಾಖೆಗಳು ಅಗತ್ಯ ಸಹಕಾರ ನೀಡಬೇಕೆಂದು ರಾಯಚೂರು ವಿಭಾಗೀಯ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಹೇಳಿದರು.

ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಜರುಗಿದ ಸೇನಾ ನೇಮಕಾತಿ ರ್‍ಯಾಲಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರದ ಕೃಷಿ ವಿಶ್ವವಿದ್ಯಾಲಯದ ನಡೆಯ ಲಿರುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಬೇರೆ, ಬೇರೆ ಜಿಲ್ಲೆಗಳಿಂದ ಸುಮಾರು 15 ರಿಂದ 16



ಸಾವಿರ ಅಭ್ಯರ್ಥಿಗಳು ಭಾಗವಹಿಸಲಿದ್ದಾರೆ. ಈ ರ್‍ಯಾಲಿಯ ಯಶಸ್ವಿ ನಿರ್ವಹಣೆಗಾಗಿ ವೇದಿಕೆ ಸಮಿತಿ, ಭದ್ರತಾ ಸಮಿತಿ, ಮೂಲಭೂತ ಸೌಕರ್ಯ ಸಮಿತಿ, ಸಾರಿಗೆ ಸಮಿತಿ, ಆಹಾರ ಸಮಿತಿ, ವಸತಿ ಸಮಿತಿ, ಆರೋಗ್ಯ ನೈರ್ಮಲ್ಯೀಕರಣ ಸಮಿತಿ, ಪ್ರಚಾರ ಮತ್ತು ಮಾಧ್ಯಮ ಸಮಿತಿ, ವಿದ್ಯುತ್ ಸರಬರಾಜು ಸಮಿತಿ ಹಾಗೂ ದಾಖಲೆಗಳ ಪರಿಶೀಲನೆ ಸಮಿತಿ ರಚಿಸಲಾಗಿದೆ.

ಎಲ್ಲಾ ಸಮಿತಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ರ್‍ಯಾಲಿಯಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳಿಗೆ ಹಾಗೂ ನಿಯೋಜಿತ ಸಿಬ್ಬಂದಿಗೆ ಕುಡಿಯುವ ನೀರು, ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಮತ್ತು ಬಳಕೆಗೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಹಾಗೂ ಕ್ರೀಡಾಂಗಣದಲ್ಲಿ ಸ್ವಚ್ಛತೆಗೆ ಕ್ರಮ ವಹಿಸಬೇಕು. ಅಭ್ಯರ್ಥಿಗಳಿಗೆ ತಂಗಲು ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಅಧಿಕಾರಿಗಳ ತಂಡ ಹಾಗೂ ಅಂಬುಲೆನ್ಸ್ ವ್ಯವಸ್ಥೆ, ಅಗ್ನಿಶಾಮಕ ತಂಡ, ವಿದ್ಯುತ್ ದೀಪದ ವ್ಯವಸ್ಥೆ ಸೇರಿದಂತೆ ಮುಂತಾದ ವ್ಯವಸ್ಥೆಗಳು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನೇಮಕಾತಿ ರ್‍ಯಾಲಿಗೆ ಆಗಮಿಸುವ ಎಲ್ಲಾ ಅಭ್ಯರ್ಥಿಗಳಿಗೆ ಹಾಗೂ ರ್‍ಯಾಲಿ ವೇಳೆ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸಲಾಗುವುದು. ಜನಸಂದಣಿ ನಿರ್ವಹಣೆಗಾಗಿ ಕ್ರೀಡಾಂಗಣದ ಹೊರಗಡೆ, ಮುಂಭಾಗದಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ ಸಾರ್ವಜನಿಕ ರಸ್ತೆ ಸಂಚಾರಕ್ಕೆ ತೊಂದರೆಯಾಗದಂತೆ (2ನೇಪುಟಕ್ಕೆ)

## ಚನ್ನರಾಯಪಟ್ಟಣ ಭೂಸ್ವಾಧೀನ ಪ್ರಕ್ರಿಯೆಯನ್ನು ಸರ್ಕಾರ ಕೈಬಿಡಬೇಕು : ದುರುಗಪ್ಪ ತಡಕಲ್

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.03–**ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣದ ರೈತರು1,180 ದಿನಗಳಿಂದ ನಡೆಸುತ್ತಿರುವ ಚನ್ನರಾಯಪಟ್ಟಣ ಭೂಸ್ವಾಧೀನ ವಿರೋಧಿ ಹೋರಾಟಕ್ಕೆ ಬೆಂಬಲಿಸಿ ತಾಲೂಕಿನ ಎದ್ದೇಳು ಕರ್ನಾಟಕ ಹಾಗೂ ರೈತ, ಪ್ರಗತಿಪರ ಮತ್ತು ದಲಿತಪರ ಸಂಘಟನೆಗಳ ವತಿಯಿಂದ ಬೆಂಬಲ ನೀಡಲಾಗುತ್ತಿದೆ ಎಂದು ದುರುಗಪ್ಪ ತಡಕಲ್ ತಿಳಿಸಿದರು.

ಪಟ್ಟಣದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಸುಮಾರು ದಿನಗಳಿಂದ ರಾತ್ರಿ ಹಗಲು ಎನ್ನದೆ ರೈತರು ನಮ್ಮ ಜೀವವನ್ನು ಲೆಕ್ಕಿಸದೆ ಹೋರಾಟ



ಮಾಡುತ್ತಿದ್ದಾರೆ. ರಾಜ್ಯ ಸರ್ಕಾರ ಗಮನಿಸಬೇಕು. ಚನ್ನರಾಯಪಟ್ಟಣದ ಭೂಮಿ ಫಲವತ್ತಾದ ಕೃಷಿ ಭೂಮಿಯಾಗಿದ್ದು, ಸಾವಿರಾರು ಜನ ಅದನ್ನು ನಂಬಿ ಬದುಕುತ್ತಿದ್ದಾರೆ. ಎಲ್ಲದಕ್ಕಿಂತ ಹೆಚ್ಚಾಗಿ ಅವರು ಈ ಭೂಮಿಯನ್ನು ಕಂಪನಿಗಳಿಗೆ ಕೊಡಲು ಒಪ್ಪಿಗೆ ಇಲ್ಲ ಎಂದು ಸ್ಪಷ್ಟವಾಗಿ ಸರಕಾರದ ಗಮನಕ್ಕೆ ತಂದಿದ್ದಾರೆ.

ರೈತರ ಕೂಗನ್ನು ಕೇಳಿಸಿಕೊಳ್ಳದೆ ಅಂದಿನ ಬಿಜೆಪಿ ಸರಕಾರ ಈ ಭೂ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸಿತ್ತು. ಆಗ ಕಾಂಗ್ರೆಸ್ ಪಕ್ಷವು ಇದನ್ನು ವಿರೋಧಿಸಿತ್ತು. ಖುದ್ದು ಹೋರಾಟ ಸ್ಥಳಕ್ಕೆ ಭೇಟಿ ನೀಡಿ ಬೆಂಬಲವನ್ನು ಸಹ ನೀಡಿತ್ತು. ಈಗ ಏಕೆ ಆ ಭೂಮಿಯನ್ನು ಸ್ವಾಧೀನ ಪಡಿಸಿ ಕೊಳ್ಳಲೇಬೇಕು ಎಂದು ಸರಕಾರ ಪಟ್ಟು ಹಿಡಿದಿದೆ ಎಂಬುದು ಅರ್ಥವಾಗುತ್ತಿಲ್ಲ ಕೂಡಲೇ ಗಮನಹರಿಸಿ ಸರ್ಕಾರ ಆದೇಶ ವಾಪಾಸ್ ಪಡೆಯಬೇಕು ಎಂದರು. ಈ ಸಂದರ್ಭದಲ್ಲಿರೈತ ಸಂಘದ ಜಿಲ್ಲಾಧ್ಯಕ್ಷ ನಾಗನಗೌಡ, ಶರಣಕುಮಾರ ಮುದ್ದಂಗುಡ್ಡಿ, ಮಾರೆಪ್ಪ ಹರವಿ, ರಾಮನಗೌಡ ಖರಾಬದಿನ್ನಿ ಉಪಸ್ಥಿತರಿದ್ದರು.

## ಶ್ರೀ ಧರ್ಮಸ್ಥಳ ಗ್ರಾಮಭೀವೃದ್ದಿ ಯೋಜನೆಯ ವತಿಯಿಂದ ಮಾಶಸನ ವಿತರಣೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.3–**ತಾಲೂಕಿನ ಕಾತರಕಿ ಗ್ರಾಮದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಭೀವೃದ್ದಿ ಯೋಜನೆಯ ವತಿಯಿಂದ ಒಂಟಿಯಾಗಿರುವ ವೃದ್ದೆ ತಾಯಮ್ಮ ರವರಿಗೆ ತಾಲೂಕು ಯೋಜನಾಧಿಕಾರಿಗಳಾದ ಸುನಿತಾ ಪ್ರಭು ರವರು ಮಾಸಿಕ ಒಂದು ಸಾವಿರ ಚೆಕ್ ಹಾಗೂ ವಾತ್ಸಲ್ಯ ಮಿಕ್ಸ್ ವಿತರಣೆ ಮಾಡಿ ಮಾತನಾಡಿ ಶ್ರೀ ಧರ್ಮಸ್ಥಳದ ಶ್ರೀ ವಿರೇಂದ್ರ ಹೆಗಡ್ಡೆಯವರು ಹಾಗೂ ಮಾತೃಶ್ರೀ ಹೇಮಾವತಿ ಅಮ್ಮನವರು ಕುಟುಂಬದಲ್ಲಿ ನೋಡಿಕೊಳ್ಳುವುದಕ್ಕೆ ಯಾರು ಇಲ್ಲದ ವೃದ್ದರಿಗೆ ಔಷಧೋಪಚಾರಕ್ಕಾಗಿ ಪ್ರತಿ ತಿಂಗಳು ಒಂದು ಸಾವಿರ ಮಾಶಸನ ಹಾಗೂ ಪೌಷ್ಟಿಕ ಆಹಾರವಾಗಿರುವ ವಾತ್ಸಲ್ಯ ಮಿಕ್ಸ್ ಅನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ತಾ. ಜ್ಞಾನ ವಿಕಾಸ ಸಮನ್ವಯಾಧಿಕಾರಿ ಜ್ಯೋತಿ , ವಲಯದ ಮೇಲ್ವಿಚಾರಕರಾದ ಮೈಲಾರಿ ಕಾರ್ಯಕ್ಷೇತ್ರದ ಸೇವಾ ಪ್ರತಿನಿಧಿ ರೇಣುಕಮ್ಮ ಇದ್ದರು.



## ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.3–**ಪಟ್ಟಣದ ಶ್ರೀ ವೆಂಕಟೇಶ್ವರಪ್ರೌಢ ಶಾಲೆಯ ಸಭಾಂಗಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಟ್ರಸ್ಟ್ ಮಾನ್ವಿ ವತಿಯಿಂದ ನಡೆದ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ನಡೆದ ಜಾಗೃತಿ ಕಾರ್ಯಕ್ರಮವನ್ನು ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರದ ಮಹಾಂತೇಶ್ ವಾಲಿಕಾರ ಉದ್ಘಾಟಿಸಿ ಮಾತನಾಡಿ ತಂಬಾಕು ಉತ್ಪನ್ನಗಳಿಂದ ಮರಣಾಂತಿಕ ಕ್ಯಾನ್ಸರ್ ಕಾಯಿಲೆ ಬರುತ್ತದೆ. (2ನೇಪುಟಕ್ಕೆ)

## ಗೂಡ್ಸ್ ವಾಹನ ಬಿದ್ದು ಇಬ್ಬರ ಸಾವು: ಸುದ್ದಿ ತಿಳಿದ ತಾಯಿ ಕೂಡ ಸಾವು

**ಬೀದರ್,ಜು.3–**ಪ್ರಯಾಣಿಕರಿದ್ದ ಗೂಡ್ಸ್ ವಾಹನವೊಂದು ಏಕಾಏಕಿ ಬಾವಿಗೆ ಬಿದ್ದು ಇಬ್ಬರು ಮೃತಪಟ್ಟು, 4 ಮಂದಿ ಗಾಯಗೊಂಡಿರುವ ಘಟನೆ ಬೀದರ್‌ನಲ್ಲಿ ನಡೆದಿದೆ.

ಬೀದರ್ ತಾಲ್ಲೂಕಿನ ಘೋಡಂಪಳ್ಳಿ ಗ್ರಾಮದಲ್ಲಿ ಈ ಅಪಘಾತ ನಡೆದಿದ್ದು, ಪ್ರಯಾಣಿಕರಿದ್ದ ಗೂಡ್ಸ್ ವಾಹನ ಏಕಾಏಕಿ ರಸ್ತೆ ಬದಿಯ ಬಾವಿಗೆ ಉರುಳಿ ಬಿದ್ದಿದೆ. ಈ ಘಟನೆಯಲ್ಲಿ ಇಬ್ಬರು ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಗಾಯಗೊಂಡವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ.

ಮೃತಪಟ್ಟವರನ್ನು ಗೂಡ್ಸ್



ವಾಹನ ಚಾಲಕ ಘೋಡಂಪಳ್ಳಿ ಗ್ರಾಮದ ಲಕ್ಷ್ಮಿಕಾಂತ್ ಅಲಿಯಾಸ್ ಕಾಂತು ಮಹಾರಾಜ ತಂದೆ ಶಂಕರರಾವ (45) ಮತ್ತು ರವಿ ತಂದೆ ಮೋನಪ್ಪ (18) ಎಂದು ಗುರುತಿಸಲಾಗಿದ್ದು, ಇವರಿಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಗಾಯಗೊಂಡಿರುವ ಅರ್ಜುನ್ ತಂದೆ ವೈಜನಾಥ, ಪ್ರಜ್ವಲ್ ತಂದೆ ಶ್ರೀಕಾಂತ, ಪವನ್ ತಂದೆ ತಿಪ್ಪಣ್ಣ, ಮತ್ತು ಸಂಗಮೇಶ್ ತಂದೆ ತುಕಾರಾಮ ಇವರೆಲ್ಲ ಘೋಡಂಪಳ್ಳಿ ಗ್ರಾಮದವರಾಗಿದ್ದು, ಬೀದರ್‌ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಗೊಂಡವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗಿದೆ.

ಗೂಡ್ಸ್ ಚಾಲಕನ ನಿಯಂತ್ರಣ ತಪ್ಪಿ ಬಾವಿಗೆ ಬಿದ್ದಿದೆ. ಆಳದ ಬಾವಿಗೆ ಗೂಡ್ಸ್ ವಾಹನ ಬಿದ್ದಿದ್ದನ್ನು ಗಮನಿಸಿದ ಸ್ಥಳೀಯರು ಗೂಡ್ಸ್ ವಾಹನದಲ್ಲಿದ್ದ ಪ್ರಯಾಣಿಕರ ರಕ್ಷಣೆಗೆ ಧಾವಿಸಿ ಎಲ್ಲರನ್ನೂ ಬಾವಿಯಿಂದ ಮೇಲೆತ್ತಿದ್ದು, ಅಷ್ಟರಲ್ಲಿ ಇಬ್ಬರ ಜೀವ ಹೋಗಿತ್ತು.

ಈ ಘಟನೆ ಸಂಬಂಧ ಗಾಂಧಿಗಂಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ತನಿಖೆ ನಡೆಸಿದ್ದಾರೆ.

**ಮಗನ ಸಾವಿನ ಸುದ್ದಿ ಕೇಳಿ ತಾಯಿ ಸಾವು:** ಬೀದರ್ ಜಿಲ್ಲೆಯ ಘೋಡಂಪಳ್ಳಿ ಗ್ರಾಮ ಸಮೀಪ ಸಂಭವಿಸಿದ ಅಪಘಾತದಲ್ಲಿ (2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಕೈ ಸರ್ಕಾರದಿಂದ ಪೊಲೀಸ್ ಇಲಾಖೆಗೆ ಧಕ್ಕೆ :ಆರ್.ಅಶೋಕ್

(ಬಂದಿದೆ. ಇಡೀ ಪೊಲೀಸ್ ಇಲಾಖೆಯ ಮನೋಬಲಕ್ಕೆ ಚ್ಯುತಿ ತಂದಿದೆ. ಅಧಿಕಾರಶಾಹಿಯ ನೈತಿಕತೆಗೆ ಪೆಟ್ಟು ಕೊಟ್ಟಿದೆ. ನೌಕರ ಶಾಹಿಯ ಆತ್ಮಸ್ಥೈರ್ಯ ಕುಸಿದಿದೆ ಎಂದು ಅಶೋಕ್ ಟೀಕಿಸಿದ್ದಾರೆ.

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೇ ನಿಮ್ಮ ಎಡವಟ್ಟುಗಳಿಂದ ಪ್ರತಿದಿನ ಒಂದಲ್ಲ ಒಂದು ರೀತಿ ನಿಮ್ಮ ಸರ್ಕಾರ ಹಾಗೂ ನಿಮಗೆ ವೈಯುಕ್ತಿಕವಾಗಿ ಕೆಟ್ಟ ಹೆಸರು ಬರುತ್ತಲೆ ಇದೆ. ಇನ್ನಾದರೂ ಈ ಭಂಡ ಬಾಳು ಬಿಡಿ ಅಧಿಕಾರ ವ್ಯಾಮೋಹ ಬಿಟ್ಟು ರಾಜೀನಾಮೆ ಕೊಟ್ಟು ಇರುವ ಅಲ್ಪಸ್ವಲ್ಪ ಗೌರವವನ್ನಾದರೂ ಉಳಿಸಿಕೊಳ್ಳಿ ಎಂದು ಅಶೋಕ್ ಕಿವಿ ಮಾತು ಹೇಳಿದ್ದಾರೆ.

ಖಳನಾಯಕನಾಗಿ ಇತಿಹಾಸದ ಪುಟ ಸೇರುವುದಕ್ಕಿಂತ ಗೌರವದಿಂದ ಕುರ್ಚಿ ತ್ಯಾಗ ಮಾಡುವುದು ನಿಮಗೂ ಒಳಿತು, ರಾಜ್ಯಕ್ಕೂ ಒಳಿತು ಎಂದು ಅಶೋಕ್ ಸಿದ್ಧರಾಮಯ್ಯನವರನ್ನು ಉದ್ದೇಶಿಸಿ ಟ್ವೀಟ್ ಮಾಡಿದ್ದಾರೆ.

# ಗೂಡ್ಸ್ ವಾಹನ ಬಿದ್ದು ಇಬ್ಬರ ಸಾವು: ಸುದ್ದಿ ತಿಳಿದ ತಾಯಿ ಕೂಡ ಸಾವು

ಮಗ ಮೃತಪಟ್ಟ ಸುದ್ದಿ ಕೇಳಿ ಎದೆಯೊಡೆದು ತಾಯಿಯೊಬ್ಬರು ಮೃತಪಟ್ಟಿದ್ದಾರೆ.

ಘೋಡಂಪಳ್ಳಿ ಗ್ರಾಮದ ಬಳಿ ಸಂಭವಿಸಿದ ಅಪಘಾತದಲ್ಲಿ ರವಿ ತಂದೆ ಮೋನಪ್ಪ (18) ಎಂಬ ಯುವಕ ಮೃತಪಟ್ಟಿದ್ದು, ಅಪಘಾತದಲ್ಲಿ ಮಗ ಮೃತಪಟ್ಟ ಸುದ್ದಿ ತಿಳಿದು ತಾಯಿ ಶಾರಾದಾಬಾಯಿ (70) ಎದೆಯೊಡೆದು  ಬೆಳಗಿನಜಾವ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದುಬಂದಿದೆ. ಬಂಧುಗಳ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಶೋಕದ ಛಾಯೆ ಆವರಿಸಿದೆ

# ಆಗಸ್ಟ್‌ನಲ್ಲಿ ರಾಯಚೂರಲ್ಲಿ ಸೇನಾ ನೇಮಕಾತಿ ರ‍್ಯಾಲಿ: ಸಹಕಾರ ನೀಡಲು ಅಧಿಕಾರಿಗಳಿಗೆ ಸಲಹೆ

ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು ಎಂದು ಹೇಳಿದರು.

ಈ ವೇಳೆ ಸೇನಾ ನೇಮಕಾತಿ ಅಧಿಕಾರಿ ಎ.ಕೆ.ಉಪಾಧ್ಯಾಯ ಅವರು ಮಾತನಾಡಿ, ಜಿಲ್ಲೆಯಲ್ಲಿ ಆಗಸ್ಟ್ 08 ರಿಂದ ಆಗಸ್ಟ್ 22ರವರೆಗೆ ನಡೆಯಲಿರುವ ಸೇನಾ ನೇಮಕಾತಿ ರ‍್ಯಾಲಿಗೆ ರಾಯಚೂರು ಜಿಲ್ಲಾಡಳಿತದಿಂದ ನಮಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು. ನೇಮಕಾತಿ ಪಾರದರ್ಶಕವಾಗಿ ನಡೆಸುತ್ತಿರುವುದರಿಂದ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ಮತ್ತು ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಗಾಗಿ ಕಂದಾಯ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ನಿಯೋಜನೆ ಮಾಡಬೇಕು. ಸೇನಾ ನೇಮಕಾತಿ ರ‍್ಯಾಲಿಯು ಸುಸೂತ್ರವಾಗಿ ನಡೆದರೆ ರಾಯಚೂರು ಜಿಲ್ಲಾಡಳಿತಕ್ಕೆ ಮತ್ತು ನಮ್ಮ ಸೇನೆಗೂ ಒಳ್ಳೆಯ ಹೆಸರು ಬರುತ್ತದೆ. ಹಾಗಾಗಿ ರ‍್ಯಾಲಿಯನ್ನು ಸುವ್ಯವಸ್ಥಿತವಾಗಿ ನಡೆಸಲು ತಮ್ಮ ಸಹಕಾರ ನಮಗೆ ಅತ್ಯಗತ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಶ ಬಾಬು, ಜೆಸ್ಕಾಂ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ದೇಸಾಯಿ, ಪಶ್ಚಿಮ ವೃತ್ತದ ಸಿಪಿಐ ನಿಂಗಪ್ಪ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯವಸ್ಥಾಪಕ ಸಂತೋಷ, ಪಶ್ಚಿಮ ಪೊಲೀಸ್ ಠಾಣೆಯ ಪಿ.ಎಸ್.ಐ ಮಂಜುನಾಥ, ಅಗ್ನಿಶಾಮಕ ದಳದ ರವೀಂದ್ರ ಘಟಿಗಿ ಸೇರಿದಂತೆ ಇತರರು ಇದ್ದರು.

# ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ

ಮಧ್ಯಪಾನದಿಂದ ಆರೋಗ್ಯ ಹಾಳಗುವುದಲ್ಲದೆ ಅರ್ಥಿಕವಾಗಿ ನಷ್ಟ ಉಂಟಾಗುತ್ತದೆ ಹಾಗೂ ಕುಟುಂಬದಲ್ಲಿನ ಸ್ವಾಸ್ಥ  ಹಾಳಗುತ್ತದೆ ಅದ್ದರಿಂದ ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಯಿಂದ ದೂರ ವಿರಬೇಕು ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಮೆಹಬೂಬ್ ಮುದ್ಲಾಪುರ ಮಾದಕ ವಸ್ತುಗಳ ಸೇವನೆ ಇಂದ ದೇಹಕ್ಕೆ ಆಗುವ ಹಾನಿಗಳ ಬಗ್ಗೆ ಮಾಹಿತಿ ನೀಡಿದರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಟ್ರಸ್ಟ್ ಮಾನ್ವಿ ತಾಲೂಕು ಯೋಜನಾಧಿಕಾರಿಗಳಾದ ಸುನೀತಾ ಪ್ರಭು , ಮುಖ್ಯಾಗುರು ಎಂ.ಡಿ.ಆಸ್ರಾರ್ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಡಿಕೆಶಿ ಹೇಳಿಕೆ ಹಿಂದೆ ಅಸಹಾಯಕತೆ ಇಲ್ಲ

ಒಬ್ಬ ಶಿಸ್ತಿನ ಸಿಪಾಯಿ. ಇದನ್ನು ಹಿಂದೆಯೂ ಹೇಳಿದ್ದಾರೆ. ಮುಂದೆಯೂ ಹೇಳುತ್ತಾರೆ. ಅವರು ಪಕ್ಷದ ಶಿಸ್ತನ್ನು ಪಾಲಿಸಿದ್ದಾರೆ. ಕಾಂಗ್ರೆಸ್ ಅಧ್ಯಕ್ಷರಾಗಿ ನಿಷ್ಠೆಯಿಂದ ಕೆಲಸ ಮಾಡಿದ್ದಾರೆ. ನನಗೂ ಅವರು ಸಿಎಂ ಆಗಿರಬೇಕು ಎಂಬ ಆಸೆ ಇದೆ. ಯಾವಾಗ ಏನು ಎಂಬುದನ್ನು ಹೈಕಮಾಂಡ್ ನಿರ್ಧರಿಸಲಿದೆ ಎಂದರು.

# ಹಿರಿಯ ಸಚಿವರು, ಅಧಿಕಾರಿಗಳೊಂದಿಗೆ ಸಿಎಂ ಸಿದ್ದರಾಮಯ್ಯ ಮಹತ್ವದ ಸಮಾಲೋಚನೆ

**ಬೆಂಗಳೂರು,ಜು.3–** ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಹಿರಿಯ ಸಚಿವರು, ಅಧಿಕಾರಿಗಳೊಂದಿಗೆ ಮಹತ್ವದ ಸಮಾಲೋಚನೆ ನಡೆಸಲಿದ್ದು, ಕೈಗಾರಿಕೆಯ ಉದ್ದೇಶದ ಭೂಸ್ವಾಧೀನ ಹಾಗೂ ಇತರ ವಿಚಾರಗಳ ಕುರಿತು ಮಹತ್ವದ ಚರ್ಚೆ ನಡೆಸಲಿದ್ದಾರೆ.

ಸಂಜೆ ಗೃಹಕಚೇರಿ ಕಾವೇರಿಯಲ್ಲಿ ನಡೆಯುವ ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ, ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕ ಸಚಿವ ಎಂ.ಬಿ. ಪಾಟೀಲ್, ಇಂಧನ ಸಚಿವ ಕೆ.ಜೆ. ಜಾರ್ಜ್, ಕಂದಾಯ ಸಚಿವ ಕೃಷ್ಣಬೈರೇಗೌಡ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ ಸೇರಿದಂತೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಕೆಐಎಡಿಬಿಯಿಂದ ದೇವನಹಳ್ಳಿ ತಾಲ್ಲೂಕಿನ 13 ಹಳ್ಳಿಗಳಲ್ಲಿ ಕೈಗಾರಿಕೆ ಉದ್ದೇಶಕ್ಕಾಗಿ 1,700 ಎಕರೆ ಭೂಮಿ ಸ್ವಾಧೀನಗೊಂಡಿದ್ದು, ಅದನ್ನು ವಿರೋಧಿಸಿ ರೈತರು ಪ್ರಗತಿಪರ ಸಂಘಟನೆಗಳು ಪ್ರತಿಭಟನೆ ನಡೆಸಿವೆ.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರು ಪ್ರತ್ಯೆ?ಕ ಸಭೆ ಕರೆದು ಚರ್ಚಿಸುವ ಮೂಲಕ ಮಹತ್ವದ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಯಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಒತ್ತು ಸರ್ಕಾರದ ಗುರಿ



**ಅಳಂದ,ಜು.3–**ಹೆಣ್ಣು ಮಕ್ಕಳ ಮೇಲಿನ ತಾರತಮ್ಯವನ್ನು ತೊಡೆದುಹಾಕುವುದು ಮತ್ತು ಅವರ ಬಗ್ಗೆ ಜನರಲ್ಲಿ ನಕಾರಾತ್ಮಕ ಮನೋಭಾವವನ್ನು ಬದಲಾಯಿಸುವುದು ಬೇಟಿ ಪಡಾವೋ ಬೇಟಿ ಬಚಾವೋ  ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದು ಜೆಂಡರ್ ಸ್ಪೇಷಲಿಸ್ಟ್ ಉಮಾ ಪೂಜಾರಿ ಹೇಳಿದರು.

ಗುರುವಾರ ಆಳಂದ ಪಟ್ಟಣದ ಪ್ರತಿಷ್ಠಿತ ಜೀವನಜ್ಯೋತಿ ಶಿಕ್ಷಣ ಮತ್ತು ಕಲ್ಯಾಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಪೂಜ್ಯ ಶ್ರೀರಾಜಶೇಖರ ಮಹಾಸ್ವಾಮೀಜೀ ಬಿ.ಎಡ್ ಕಾಲೇಜಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಲಬುರಗಿ ಹಾಗೂ ಮಹಾದೇವಿ ತಾಯಿ ಮಹಿಳಾ ವಿದ್ಯಾವರ್ಧಕ ಸಂಘ ಶಕ್ತಿ ಸದನ (ಸ್ವಾಧರ ಗೃಹ )ಕಲಬುರಗಿ ಸಂಯುಕ್ತಾಶ್ರಯದಲ್ಲಿ ಮಿಷನ ಶಕ್ತಿ ಯೋಜನೆ ಹಾಗೂ ಅದರ ಉಪಯೋಜನೆಗಳು ಮತ್ತು ಶಕ್ತಿ ಸದನ ಯೋಜನೆ ಬಗ್ಗೆ ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮದ ಮಹತ್ವ  ತಿಳಿಸಿದರು.

ಬೇಟಿ ಬಚಾವೋ ಬೇಟಿ ಪಢಾವೋ ಯೋಜನೆಯ ಭಾಗವಾಗಿ ಸುಕನ್ಯಾ ಸಮೃದ್ಧಿ ಯೋಜನೆ ಜಾರಿ ಮಾಡಲಾಗಿದೆ. ಈ ಯೋಜನೆಯಡಿ, ಹೆಣ್ಣು ಮಕ್ಕಳ ಹೆಸರಲ್ಲಿ ಪ್ರತಿ ತಿಂಗಳು 1000 ರೂಪಾಯಿಗಳನ್ನು ಖಾತೆಗೆ ಜಮಾ ಮಾಡಿದರೆ, ಈ ಮೊತ್ತವು ಒಂದು ವರ್ಷದಲ್ಲಿ 12 ಸಾವಿರ ಆಗುತ್ತದೆ. 14 ವರ್ಷಗಳಲ್ಲಿ ಒಟ್ಟು ಮೊತ್ತ 1,68,000 ಆಗಲಿದೆ. ನಂತರ 21 ವರ್ಷಗಳ ನಂತರ ನಿಮ್ಮ ಮಗಳು 6 ಲಕ್ಷಕ್ಕೂ ಹೆಚ್ಚು ಹಣ ಪಡೆಯುತ್ತಾರೆ ಎಂದು ನುಡಿದರು.

ಡಾ. ಭೂಮಿಕಾ ಮಾತನಾಡಿ, ಈ ಯೋಜನೆಯನ್ನು ಎರಡು ಘಟಕಗಳಾಗಿ ವಿಂಗಡಿಸಲಾಗಿದೆ. ಮೊದಲನೆಯದು– ರಾಷ್ಟ್ರವ್ಯಾಪಿ ಅಭಿಯಾನವನ್ನು ನಡೆಸುವ ಮೂಲಕ ಸಿಎಸ್‌ಆರ್ (ಮಕ್ಕಳ ಲಿಂಗ ಅನುಪಾತ) ಕುಸಿತವನ್ನು ಕಡಿಮೆ ಮಾಡುವುದು. ಎರಡನೆಯದು– 2011 ರ ಜನಗಣತಿಯ ಪ್ರಕಾರ, ಕಡಿಮೆ ಲಿಂಗಾನುಪಾತ ಇರುವ 100 ಜಿಲ್ಲೆಗಳಲ್ಲಿ ಕೆಲಸ ಮಾಡುವುದು. ಇದರಲ್ಲಿ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಸೇರಿವೆ. ಆದರೆ, ಈಗ ಸರ್ಕಾರ ದೇಶದ ಇತರೆ ಜಿಲ್ಲೆಗಳಲ್ಲೂ ಈ ಯೋಜನೆಯನ್ನು ಜಾರಿ ಮಾಡಲು ಮುಂದಾಗಿದೆ ಎಂದು ಮಾಹಿತಿ ನೀಡಿದರು.

ಮಹದೇವಿ ತಾಯಿ ವಿದ್ಯಾವರ್ಧಕ ಸಂಘದ ಅಧೀಕ್ಷಕಿ ಜಯಶ್ರೀ ಮಾತನಾಡಿ, ಲಿಂಗಾನುಪಾತದ ಅಂತರವನ್ನು ಕಡಿಮೆ ಮಾಡುವುದು, ಮಹಿಳಾ ಸಬಲೀಕರಣವನ್ನು ಉತ್ತೇಜಿಸುವುದು ಮತ್ತು ಲಿಂಗ ಅಸಮಾನತೆಯನ್ನು ತೆಗೆದುಹಾಕುವುದು ಯೋಜನೆಯ ಉದ್ದೇಶವಾಗಿದೆ. ಯೋಜನೆಯಡಿ, ಹೆಣ್ಣು ಮಗುವಿಗೆ ಶಿಕ್ಷಣ ಒದಗಿಸಲು ಮತ್ತು ಸಮಾಜದಲ್ಲಿ ಅವರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಪ್ರಯತ್ನಿಸಲಾಗುತ್ತಿದೆ. ಹೆಣ್ಣು ಮಕ್ಕಳ ಹೆಸರಲ್ಲಿ ಬ್ಯಾಂಕ್‌ನಲ್ಲಿ ಹಣ ಇಟ್ಟರೆ ಅವರ ಉನ್ನತ ಶಿಕ್ಷಣಕ್ಕೆ ಅನುಕೂಲವಾಗಲಿದೆ. ಈ ಹಣದಿಂದ ನಿಮ್ಮ ಮಗಳು ತನ್ನ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಸಿಬ್ಬಂದಿಗಳು, ಪ್ರಶಿಕ್ಷಣಾರ್ಥಿಗಳು, ಬೋಧಕೇತರ ಸಿಬ್ಬಂದಿಗಳು ಭಾಗವಹಿಸಿದ್ದರು. ಪ್ರಾಚಾರ್ಯ ಅಶೋಕರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.

# ಕರಾವಳಿ– ಮಲೆನಾಡಲ್ಲಿ ವರುಣನ ಅಬ್ಬರ: ಶಾಲಾ, ಕಾಲೇಜಿಗೆ ರಜೆ



**ಬೆಂಗಳೂರು, ಜು. 3–** ಕರಾವಳಿ ಮತ್ತು ಮಲೆನಾಡು ಭಾಗದಲ್ಲಿ ಮಳೆ ಮುಂದುವರಿದಿದೆ. ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ, ಹೊಸನಗರ, ಹಾಗೂ ಸಾಗರ ತಾಲ್ಲೂಕಿನಲ್ಲಿ ವರ್ಷಾಧಾರೆಯಾಗುತ್ತಿದ್ದು, ಈ ಮೂರು ತಾಲ್ಲೂಕಿನ ಅಂಗನವಾಡಿ ಸೇರಿದಂತೆ ಶಾಲಾ, ಕಾಲೇಜುಗಳಿಗೆ ತಾಲ್ಲೂಕು ತಹಶೀಲ್ದಾರ್ ರಜೆ ಘೋಷಿಸಿದ್ದಾರೆ.

ಈ ಮೂರು ತಾಲ್ಲೂಕುಗಳಲ್ಲಿ ಮಲೆನಾಡು ಪ್ರದೇಶವಾಗಿದ್ದು ಪ್ರತಿ ವರ್ಷ ಭಾರೀ ಮಳೆಯಾಗುತ್ತಿದೆ. ತಾಲ್ಲೂಕಿನ ವಿವಿಧ ಭಾಗದಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಹಳ್ಳಗಳನ್ನು ದಾಟಿಕೊಂಡು ದೂರದ ಊರುಗಳಿಂದ ಬಸ್‌ನಲ್ಲಿ ವಿದ್ಯಾರ್ಥಿಗಳು ಬರುವುದರಿಂದ ಸಾಕಷ್ಟು ತೊಂದರೆ ಉಂಟಾಗುತ್ತದೆ. ಈ ಕಾರಣಕ್ಕಾಗಿ ತಾಲ್ಲೂಕು ಆಡಳಿತ ತಮ್ಮ ವ್ಯಾಪ್ತಿಯ ಎಲ್ಲಾ ಅಂಗನವಾಡಿ, ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಿ ಆದೇಶ ಹೊರಡಿಸಿದೆ.

ಗುರುವಾರ ರಜೆ ನೀಡಿರುವ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಶನಿವಾರದಂದು ಪೂರ್ಣ ತರಗತಿಗಳನ್ನು ನಡೆಸಲು ಸೂಚನೆ ನೀಡಲಾಗಿದೆ.

ಕೊಡಗು ಜಿಲ್ಲೆಯಲ್ಲಿ ಗಾಳಿ, ಮಳೆ ಸುರಿಯುತ್ತಿದ್ದು, ಜಿಲ್ಲೆಯಾದ್ಯಂತ ಆರೇಂಜ್ ಅಲರ್ಟ್ ಘೋಷಿಸಲಾಗಿದೆ. ಧಾರಾಕಾರ ಮಳೆಯಿಂದಾಗಿ ನದಿಗಳ ನೀರಿನ ಮಟ್ಟ ಹೇರಿಕೆಯಾಗಿದೆ. ಜಿಲ್ಲೆಯಲ್ಲಿ ಭಾರೀ ಮಳೆ ಬೀಳಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಿರುಸಿನ ಮಳೆಯ ಜೊತೆಗೆ ರಭಸದಿಂದ ಗಾಳಿ ಬೀಸುತ್ತಿದೆ. ಈ ಹಿನ್ನೆಲೆಯಲ್ಲಿ ಕೊಡಗಿನ ಅಂಗನವಾಡಿ, ಶಾಲಾ, ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲೂ ವರುಣನ ಅಬ್ಬರ ಮುಂದುವರಿದಿದ್ದು, ಜಿಲ್ಲೆಯ 5 ತಾಲ್ಲೂಕಿನ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಎನ್ ಆರ್ ಪುರ, ಕೊಪ್ಪ, ಶೃಂಗೇರಿ, ಕಳಸ, ಮೂಡಗೆರೆ ತಾಲ್ಲೂಕಿನಾದ್ಯಂತ ರಜೆ ಘೋಷಿಸಿ ಜಿಲ್ಲಾಧಿಕಾರಿ ಮೀನಾ ನಾಗರಾಜ ಆದೇಶ ಹೊರಡಿಸಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನ ಕದ್ರ ಸಮೀಪ ಭಾರೀ ಮಳೆಯಿಂದಾಗಿ ಗುಡ್ಡ ಕುಸಿದಿದೆ. ಬೆಳಗಿನ ಜಾವ ಕೊಡಸಹಳ್ಳಿ ಅಣೆಕಟ್ಟೆಗೆ ಸಾಗುವ ರಸ್ತೆಯಲ್ಲಿ ಗುಡ್ಡ ಕುಸಿತವಾಗಿದೆ. ಇದರಿಂದ ಸಂಪರ್ಕ ಕಡಿದು ಹೋಗಿದೆ. ಸ್ಥಳಕ್ಕೆ ಹಿರಿಯ ಅಧಿಕಾರಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಜೆಸಿಬಿ ಮೂಲಕ ಮಣ್ಣು ತೆರವುಗೊಳಿಸುವ ಕಾರ್ಯ ಆರಂಭಿಸಲಾಗಿದೆ.

ಮುಂಗಾರು ಮಳೆ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕದ ಜೀವನಾಡಿ ತುಂಗಭದ್ರಾ ಜಲಾಶಯ ಭರ್ತಿಯಾಗಿದೆ. ಜಲಾಶಯಕ್ಕೆ ಅಪಾರ ಪ್ರಮಾಣ ನೀರು ಹರಿದು ಬಂದಿದೆ. 105 ಟಿಎಂಸಿ ಸಾಮರ್ಥ್ಯವಿರುವ ಜಲಾಶಯದಲ್ಲಿ 80 ಟಿಎಂಸಿ ನೀರು ಭರ್ತಿಯಾಗಿದೆ. 34 ಸಾವಿರ ಕ್ಯೂಸೆಕ್ ಒಳಹರಿವು ಹೆಚ್ಚಳವಾಗಿದ್ದು, 6 ಗೇಟ್‌ಗಳ ಮೂಲಕ ನದಿಗೆ ನೀರನ್ನು ಬಿಡುಗಡೆ ಮಾಡಲಾಗುತ್ತದೆ.

ಒಟ್ಟಾರೆ ಈ ಬಾರಿಯ ಮುಂಗಾರು ಚುರುಕುಗೊಂಡಿದ್ದು, ಎಲ್ಲೆಡೆ ಮಳೆಯಾಗುತ್ತಿದ್ದು, ಅನ್ನದಾತರ ಮೊಗದಲ್ಲಿ ಮಂದಹಾಸ ಮೂಡಿದ್ದು, ಕೃಷಿ ಚಟುವಟಿಕೆ ಚುರುಕುಗೊಂಡಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಸುಬ್ರಹ್ಮಣ್ಯ , ಕಡಬ, ಸುಳ್ಯ, ತಾಲ್ಲೂಕು ಹಾಗೂ ಕುಕ್ಕೆ ಸುಬ್ರಹ್ಮಣ್ಯದಲ್ಲಿ ಮಳೆ ಮುಂದುವರಿದಿದ್ದು, ಕುಕ್ಕೆ ಸುಬ್ರಮಣ್ಯದ ಕುಮಾರಧಾರಾ ಸ್ನಾನ ಘಟ್ಟ ಮುಳುಗಡೆಯಾಗಿದೆ. ಮಳೆ ಹಿನ್ನೆಲೆಯಲ್ಲಿ ಕಡಬ ಮತ್ತು ಸುಳ್ಯ ತಾಲ್ಲೂಕಿನ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಪ್ರಾಥಮಿಕ ಮತ್ತು ಪ್ರೌಢಶಾಲೆ ಸರ್ಕಾರಿ ಅನುದಾನಿತ ಮತ್ತು ಖಾಸಗಿ ವಿದ್ಯಾ ಸಂಸ್ಥೆಗಳಿಗೆ ಹಾಗೂ ಪದವಿಪೂರ್ವ ಕಾಲೇಜುಗಳಿಗೆ ರಜೆ ನೀಡಿ, ತಹಶೀಲ್ದಾರ್ ಆದೇಶ ಹೊರಡಿಸಿದ್ದಾರೆ.

ಮಳೆಯಿಂದಾಗಿ ಕುಮಾರಧಾರಾ ನದಿ ಉಕ್ಕಿ ಹರಿಯುತ್ತಿದೆ. ರಾತ್ರಿ ವೇಳೆ ನದಿಯ ನೀರಿನ ಮಟ್ಟ ಹೇರಿಕೆಯಾಗಿದ್ದು, ಸ್ನಾನ ಘಟ್ಟ ಮುಳುಗಡೆಯಾಗಿ ಲಗೇಜ್ ಕೊಠಡಿಯವರೆಗೂ ನೀರು ಆವರಿಸಿದೆ. ನದಿಗೆ ತೆರಳದಂತೆ ಸೂಚನೆ ನೀಡಲಾಗಿದೆ.

ರಾಜ್ಯದ ಕೆಲ ಜಿಲ್ಲೆಗಳಲ್ಲಿ ವರುಣನ ಅಬ್ಬರ ಇಳಿಕೆಯಾಗಿದೆ. ಆದರೆ ಕರಾವಳಿ, ಮಲೆನಾಡು ಹಾಗೂ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮಳೆ ಬಿರುಸುಗೊಳ್ಳುವ ಸಾಧ್ಯತೆಯಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಬೆಳಗಾವಿ, ಧಾರಾವಾಡ, ಹಾವೇರಿ ಜಿಲ್ಲೆಗಳಿಗೆ ಎಲ್ಲೋ ಅಲರ್ಟ್ ಘೋಷಿಸಲಾಗಿದೆ.

# ಪ್ರಧಾನಿ ಮೋದಿಗೆ ಘಾನಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿ ಪ್ರದಾನ




**ಅಕ್ರಾ, ಜು.3–** ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇಂದು ಘಾನಾ ದೇಶದ ರಾಷ್ಟ್ರೀಯ ಗೌರವ 'ವಾದ ದಿ ಆಫೀಸರ್ ಆಫ್ ದಿ ಆ ರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಮೋದಿ ಅವರಿಗೆ ಘಾನಾದ ಅಧ್ಯಕ್ಷ ಜಾನ್ ಡ್ರಾಮಾನಿ ಮಹಾಮ ಅವರಿಂದ ಪ್ರಶಸ್ತಿಯನ್ನು ನೀಡಲಾಯಿತು.ದಿ ಆಫೀಸರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ ಪ್ರಶಸ್ತಿಯನ್ನು ಪಡೆದಿರುವುದು ಗೌರ 'ವಾನ್ವಿತ ಎಂದು ಪ್ರಧಾನಿ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಈ ಪ್ರಶಸ್ತಿ ತಮಗೆ ಅತ್ಯಂತ ಹೆಮ್ಮೆ ಮತ್ತು ಗೌರವದ ವಿಷಯ ಎಂದು ಮೋದಿ ತಮ್ಮ ಸ್ವೀಕಾರ ಭಾಷಣದಲ್ಲಿ ಹೇಳಿದರು.140 ಕೋಟಿ ಭಾರತೀಯರ ಪರವಾಗಿ ನಾನು ಈ ಪ್ರಶಸಿ ,ಯನ್ನು ವಿನಮ್ರವಾಗಿ ಸ್ವೀಕರಿಸುತ್ತೇನೆ ಎಂದು ಅವರು ಹೇಳಿದರು. ಇದನ್ನು ಭಾರತದ ಯುವಕರ ಆಕಾಂಕ್ಷೆಗಳು ಮತ್ತು ಉಜ್ವಲ ಭವಿಷ್ಯ, ಅದರ ಸಾಂಸ್ಕೃತಿಕ ಸಂಪ್ರದಾಯಗಳು ಮತ್ತು ವೈವಿಧ್ಯತೆ ಮತ್ತು ಘಾನಾ ಮತ್ತು ಭಾರತದ ನಡುವಿನ ಐತಿಹಾಸಿಕ ಸಂಬಂಧಗಳಿಗೆ ಅರ್ಪಿಸುತ್ತೇನೆ.

ಪ್ರಧಾನ ಮಂತ್ರಿಯ ವಿಶಿಷ್ಟ ರಾಜನೀತಿ ಮತ್ತು ಪ್ರಭಾವಶಾಲಿ ಜಾಗತಿಕ ನಾಯಕತ್ವವನ್ನು ಗುರುತಿಸಿ ಅವರಿಗೆ ಈ ಪ್ರಶಸ್ತಿಯನ್ನು ನೀಡಲಾಯಿತು ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಈ ವಿಶೇಷ ಕೊಡುಗೆಗಾಗಿ ಘಾನಾದ ಜನರು ಮತ್ತು ಸರ್ಕಾರಕ್ಕೆ ಧನ್ಯವಾದ ಹೇಳಿದ ಪ್ರಧಾನಿ, ಎರಡೂ ದೇಶಗಳ ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ಸಂಪ್ರದಾಯಗಳು ಪಾಲುದಾರಿಕೆಯನ್ನು ಪೋಷಿಸುವುದನ್ನು ಮುಂದುವ ರಿಸುತ್ತವೆ ಎಂದು ಹೇಳಿದರು.ಈ ಪ್ರಶಸ್ತಿಯು ಎರಡೂ ದೇಶಗಳ ನಡುವಿನ ಸ್ನೇಹವನ್ನು ಮತ್ತಷ್ಟು ಗಾಢವಾಗಿಸುತ್ತದೆ ಮತ್ತು ದ್ವಿಪಕ್ಷೀಯ ಸಂಬಂಧಗಳನ್ನು ಸ್ವೀಕರಿಸಲು ಮತ್ತು ಮುನ್ನಡೆಸಲು ತಮ್ಮ ಮೇಲೆ ಹೊಸ ಜವಾಬ್ದಾರಿಯನ್ನು ಇರಿಸುತ್ತ ದೆ ಎಂದು ಅವರು ಹೇಳಿದರು.

ಘಾನಾಗೆ ತಮ್ಮ ಐತಿಹಾಸಿಕ ರಾಜ್ಯ ಭೇಟಿಯು ಭಾರತ–ಘಾನಾ ಸಂಬಂಧಗಳಿಗೆ ಹೊಸ ಆವೇಗವನ್ನು ನೀಡುತ್ತದೆ ಎಂದು ಮೋದಿ ವಿಶ್ವಾಸ ವ್ಯಕ್ತಪಡಿಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಇದಕ್ಕೂ ಮೊದಲು, ಮೋದಿ ಮಹಾಮಾ ಅವರೊಂದಿಗೆ ವ್ಯಾಪಕ ಮಾತುಕತೆ ನಡೆಸಿದರು.ನಂತರ ಭಾರತ ಮತ್ತು ಘಾನಾ ತಮ್ಮ ಸಂಬಂಧಗಳನ್ನು ಸಮಗ್ರ ಪಾಲುದಾರಿಕೆಯ ಮಟ್ಟಕ್ಕೆ ಏರಿಸಿದವು.ಪ್ರಧಾನಿ ತಮ್ಮ ಐದು ರಾಷ್ಟ್ರಗಳ ಪ್ರವಾಸದ ಮೊದಲ ಹಂತದಲ್ಲಿ ಘಾನಾದಲ್ಲಿದ್ದಾರೆ.ಇದು ಮೂರು ದಶಕಗಳಲ್ಲಿ ಭಾರತದಿಂದ ಘಾನಾಗೆ ಪ್ರಧಾನಿ ಭೇಟಿ ನೀಡುವ ಮೊದಲ ಭೇಟಿಯಾಗಿದೆ.

# ಹೃದಯಾಘಾತಕ್ಕೆ ಕೊರೊನಾ ಲಸಿಕೆ ಕಾರಣ ಎಂಬ ಸಿಎಂ ಹೇಳಿಕೆ ತಪ್ಪು




**ನವದೆಹಲಿ, ಜು.3–** ಹಾಸನ ಜಿಲ್ಲೆಯಲ್ಲಿ ಸಂಭವಿಸಿದ ಹಠಾತ್ ಹೃದಯಾಘಾತದ ಸಾವುಗಳಿಗೆ ಕೊರೊನಾ ಲಸಿಕೆ ಕಾರಣ ಇರಬಹುದು ಎಂಬ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ತಳ್ಳಿಹಾಕಿದ್ದಾರೆ.

ಸಿದ್ದರಾಮಯ್ಯ ಅವರ ಹೇಳಿಕೆಗಳನ್ನು ವಾಸ್ತವಿಕವಾಗಿ ತಪ್ಪು ಎಂದು ಶಾ ಬಣ್ಣಿಸಿದ್ದಾರೆ ಮತ್ತು ಈ ರೀತಿಯ ತಪ್ಪು ಮಾಹಿತಿಯನ್ನು ಹರಡಬಾರದು ಎಂದು ಅವರು ಎಚ್ಚರಿಸಿದ್ದಾರೆ.

ಭಾರತದಲ್ಲಿ ಅಭಿವೃದ್ಧಿಪಡಿಸಲಾದ ಕೋವಿಡ್–19 ಲಸಿಕೆಗಳನ್ನು ಸುರಕ್ಷತೆ ಮತ್ತು ಪರಿಣಾಮಕಾರಿತ್ವಕ್ಕಾಗಿ ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿ ಕಠಿಣ ಪ್ರೊ?ಟೋಕಾಲ್‌ಗಳನ್ನು ಅನುಸರಿಸಿ ತುರ್ತು ಬಳಕೆಯ ಅಧಿಕಾರ ಚೌಕಟ್ಟಿನಡಿಯಲ್ಲಿ ಅನುಮೋದಿಸಲಾಗಿದೆ. ಈ ಲಸಿಕೆಗಳನ್ನು ಆತುರದಿಂದ ಅನುಮೋದಿಸಲಾಗಿದೆ ಎಂದು ಸೂಚಿಸುವುದು ವಾಸ್ತವಿಕವಾಗಿ ತಪ್ಪಾಗಿದೆ ಮತ್ತು ಸಾರ್ವಜನಿಕ ತಪ್ಪು ಮಾಹಿತಿಗೆ ಕೊಡುಗೆ ನೀಡುತ್ತದೆ.

ಈ ಲಸಿಕೆಗಳು ಲಕ್ಷಾಂತರ ಜೀವಗಳನ್ನು ಉಳಿಸಿವೆ ಮತ್ತು ಎಲ್ಲಾ ಲಸಿಕೆಗಳಂತೆ, ಬಹಳ ಕಡಿಮೆ ಸಂಖ್ಯೆಯ ವ್ಯಕ್ತಿಗಳಲ್ಲಿ ಅಡ್ಡಪರಿಣಾಮಗಳನ್ನು ಉಂಟುಮಾಡಬಹುದು. ಹಿಂದಿನಿಂದ ದೂಷಿಸುವ ಬದಲು, ಅವುಗಳ ಅಭಿವೃದ್ಧಿಯ ಹಿಂದಿನ ವಿಜ್ಞಾನ ಮತ್ತು ಡೇಟಾ–ಚಾಲಿತ ಪ್ರಕ್ರಿಯೆಗಳನ್ನು ಒಪ್ಪಿಕೊಳ್ಳುವುದು ಮುಖ್ಯ, ಎಂದು ಅವರು ಎಕ್ಸ್‌ನಲ್ಲಿ ಬರೆದಿದ್ದಾರೆ.

# ರವಿ ಕುಮಾರ್ ಕ್ಷಮೆಯಾಚನೆಗೆ ಆಗ್ರಹ

**ಬೆಂಗಳೂರು,ಜು.3–** ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿ ಕುಮಾರ್ ವಿರುದ್ಧ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಕಿಡಿ ಕಾರಿ ರವಿಕುಮಾರ್ ಕ್ಷಮೆಯಾಚಿಸಬೇಕು ಇಲ್ಲದಿದ್ದರೆ ಅವರ ವಿರುದ್ಧ ಹೋರಾಟ ನಡೆಸುವ ಎಚ್ಚರಿಕೆಯನ್ನ ನೀಡಿದ್ದಾರೆ

ಕರ್ನಾಟಕದ ಬಿಜೆಪಿ ನಾಯಕರಿಂದ ಮಹಿಳೆಯರ ನಿಂದನೆ ನಿರಂತರವಾಗಿ ನಡೆಯುತ್ತಿದೆ. ಓರ್ವ ಹಿರಿಯ ಮಹಿಳಾ ಐಎಎಸ್ ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ರೀತಿ ಬಿಜೆಪಿ ಎಂಎಲ್ಸಿ ಅವರ ಮನಸ್ಥಿತಿ ಎಂಥಹದ್ದು ಎಂಬುದನ್ನ ತೋರಿಸುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ . ರವಿ ಕುಮಾರ್ ಅವರು ಸಮಸ್ತ ಮಹಿಳಾ ಕುಲಕ್ಕೆ ಮಾಡಿರುವ ಅವಮಾನ ಇದಾಗಿದೆ. ರವಿಕುಮಾರ್ ಅವರ ಹೇಳಿಕೆಯನ್ನು ಕೇಂದ್ರ ಬಿಜೆಪಿ ನಾಯಕರು ಸಮರ್ಥಿಸಿಕೊಳ್ಳುವರೇ ಎಂದು ಸಚಿವರು ಪ್ರಶ್ನಿಸಿದ್ದಾರೆ.

ಕಳೆದ ಬೆಳಗಾವಿ ಅಧಿವೇಶನದ ವೇಳೆಯಲ್ಲಿ ಸಿಟಿ ರವಿ ಅವರು ನನ್ನ ಬಗ್ಗೆ ಕೆಟ್ಟಾಗಿ ಮಾತನಾಡಿದಾಗ ಆ ಪಕ್ಷದ ನಾಯಕರು ಒಂದೂ ಮಾತನಾಡಲಿಲ್ಲ. ಇಂಥ ನಾಯಕರ ಹೇಳಿಕೆಗಳಿಗೆ ಕೇಂದ್ರದ ನಾಯಕರು ಪರೋಕ್ಷ ಬೆಂಬಲ ನೀಡಿದಂತಿದೆ. ಇದು ಮಹಿಳೆಯರಿಗೆ ಬಿಜೆಪಿ ನಾಯಕರು ಕೊಡುವ ಗೌರವ ಎಂತದ್ದು ಎಂಬುದನ್ನು ತೋರಿಸುತ್ತದೆ. ಜವಾಬ್ದಾರಿಯುತ ಸ್ಥಾನದಲ್ಲಿದ್ದುಕೊಂಡು ಇಂಥ ಅವಹೇಳನಕಾರಿ ಪದಗಳನ್ನು ಬಳಸುವ ಬಿಜೆಪಿ ನಾಯಕರಿಗೆ ಬುದ್ಧಿ ಭ್ರಮಣೆಯಾಗಿದೆ ಅನಿಸುತ್ತದೆ. ಇನ್ನು ಮುಂದಾದರೂ ಇಂಥ ಹೇಳಿಕೆಗಳನ್ನು ನೀಡದೆ, ಜವಾಬ್ದಾರಿಯಿಂದ ವರ್ತಿಸಲಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಸಾರ್ವಜನಿಕವಾಗಿ ಮಹಿಳಾ ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ರವಿ ಕುಮಾರ್ ಅವರು ಕೂಡಲೇ ಕ್ಷಮೆಯಾಚಿಸಬೇಕು ಎಂದು ಸಚಿವರು ಆಗ್ರಹಿಸಿದ್ದಾರೆ. ತಮ್ಮ ತಪ್ಪನ್ನು ಅರಿವು ಮಾಡಿಕೊಂಡು ಕ್ಷಮೆ ಕೇಳಲಿ, ಇಲ್ಲವಾದರೆ ರವಿ ಕುಮಾರ್ ಅವರು ಸಾರ್ವಜನಿಕರ ಪ್ರತಿಭಟನೆ ಎದುರಿಸಬೇಕಾದೀತು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಎಚ್ಚರಿಕೆ ನೀಡಿದ್ದಾರೆ.

# ತಿಮ್ಮಪ್ಪನ ಹುಂಡಿಗೆ ಒಂದೇ ದಿನದಲ್ಲಿ 5.3 ಕೋಟಿ ಕಾಣಿಕೆ..!



**ತಿರುಪತಿ,ಜು.3–** ಹಿಂದೂಗಳ ಪವಿತ್ರಾ ಧಾರ್ಮಿಕ ಕ್ಷೇತ್ರವಾದ ತಿರುಪತಿ– ತಿರುಮಲದಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನಕ್ಕೆ ಒಂದೇ ದಿನ ಹುಂಡಿಗೆ ದಾಖಲೆಯ 5.3 ಕೋಟಿ ಸಂಗ್ರಹವಾಗಿದೆ.

ದೇವಸ್ಥಾನಕ್ಕೆ ಯಾತ್ರಾರ್ಥಿಗಳ ಆಗಮನ ತುಸು ಕಡಿಮೆಯಾಗಿದ್ದರೂ ಈ ಸಂಗ್ರಹಣೆಯು ಕಳೆದ ವರ್ಷದಲ್ಲಿ ದೇವಾಲಯವು ಸ್ವಿ?ಕರಿಸಿದ ಅತಿ ಹೆಚ್ಚು ಏಕದಿನದ ಹುಂಡಿಯಾಗಿದೆ.ತಿರುಮಲ ದೇವಸ್ಥಾನದಲ್ಲಿ 78,730 ಯಾತ್ರಿಕರು ಪೂಜೆ ಸಲ್ಲಿಸಿದ್ದಾರೆ. ಇದು ಸಾಮಾನ್ಯವಾಗಿ ಹಬ್ಬ ಹರಿದಿನಗಳು ಮತ್ತು ಬೇಸಿಗೆ ಕಾಲದಲ್ಲಿ ದಾಖಲಾಗುವ ಒಂದು ಲಕ್ಷ ಮತ್ತು ಅದಕ್ಕಿಂತ ಹೆಚ್ಚಿನ ಯಾತ್ರಾರ್ಥಿಗಳ ಸಂಖ್ಯೆಗಿಂತ ಕಡಿಮೆಯಾಗಿದೆ.ಸಾಮಾನ್ಯ ಜನದಟ್ಟಣೆಯ ಹೊರತಾಗಿಯೂ, ವಿಶ್ವದ ಅತ್ಯಂತ ಶ್ರೀಮಂತ ಹಿಂದೂ ದೇವಾಲಯದ ಹುಂಡಿಗೆ 5.3 ಕೋಟಿ ರೂ. ಕಾಣಿಕೆ ಹರಿದುಬಂದಿದೆ. ಇದು ಇದುವರೆಗಿನ ವರ್ಷದ ಅತ್ಯಧಿಕ ಕಾಣಿಕೆಯಾಗಿದೆ.

2023ರ ಜನವರಿ 2 ರಂದು ಒಂದೇ ದಿನದಲ್ಲಿ ಅತಿ ಹೆಚ್ಚು ಹುಂಡಿ ಕಾಣಿಕೆ ಸಂಗ್ರಹವಾಗಿತ್ತು. ಆ ದಿನ ದೇವಾಲಯಕ್ಕೆ 7.68 ಕೋಟಿ ರೂ. ಒಂದೇ ದಿನದಲ್ಲಿ ಹರಿದುಬಂದಿತ್ತು. ಹಿಂದೆಯೂ 6 ಕೋಟಿಗೂ ಹೆಚ್ಚು ಕಾಣಿಕೆ ಸಂಗ್ರಹವಾಗಿರುವ ನಿದರ್ಶನ ಇದೆ.ಸಂಪತ್ತಿಗೆ ಹೆಸರುವಾಸಿಯಾದ ತಿರುಪತಿಗೆ ಪ್ರತಿ ತಿಂಗಳು 100 ಕೋಟಿಯಿಂದ 140 ಕೋಟಿ ರೂ. ಹುಂಡಿ ಹಣ ಸಂಗ್ರಹವಾಗುತ್ತಿದೆ.

ಸುಮಾರು 100 ಕೆಜಿಯಿಂದ 140 ಕೆಜಿ ಚಿನ್ನವನ್ನು ಭಕ್ತರಿಂದ ದೇಣಿಗೆಯಾಗಿ ಪಡೆಯಲಾಗುತ್ತದೆ. ಬ್ಯಾಂಕುಗಳಲ್ಲಿ ಟಿಟಿಡಿಯ ಸ್ಥಿರ ಠೇವಣಿಗಳ ಮೊತ್ತ 20,000 ಕೋಟಿ ರೂ.ಗಿಂತ ಸ್ವಲ್ಪ ಹೆಚ್ಚು. ಈ ವರ್ಷ ಇಲ್ಲಿಯವರೆಗೆ, ದೈನಂದಿನ ಸಂಗ್ರಹವು ಸರಾಸರಿ 1.6 ರಿಂದ 2 ಕೋಟಿಗಳ ನಡುವೆ ಇದೆ. ಇದಕ್ಕೂ ಮೊದಲು, ಜನವರಿ 1 ರಂದು ಭಕ್ತರಿಂದ ದೇಣಿಗೆ ನಾಲ್ಕು ಕೋಟಿಗಳಿಗಿಂತ ಸ್ವಲ್ಪ ಹೆಚ್ಚು ಸಂಗ್ರಹವಾಗಿತ್ತು.

ಸರಾಸರಿ ದಿನ, ದೇವಾಲಯವು ಸುಮಾರು 70,000 ಯಾತ್ರಿಕರನ್ನು ಭೇಟಿ ನೀಡಿದರೆ, ಶುಭ ಸಂದರ್ಭಗಳಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಭೇಟಿ ನೀಡುವವರನ್ನು ದಾಖಲಿಸಲಾಗುತ್ತದೆ. ವಾರ್ಷಿಕವಾಗಿ, ದೇವಾಲಯವು ಹುಂಡಿ ಸಂಗ್ರಹದಿಂದ ಸುಮಾರು 650–700 ಕೋಟಿಗಳನ್ನು ಪಡೆಯುತ್ತದೆ. ಸುಮಾರು 2009 ರವರೆಗೆ, ಇದು ಹುಂಡಿ ಸಂಗ್ರಹದಿಂದ ಸುಮಾರು 350 ಕೋಟಿಗಳಷ್ಟಿತ್ತು. ದೈನಂದಿನ ಸರಾಸರಿ ಯಾತ್ರಿಕರ ದಟ್ಟಣೆ: 60–70,000 ಜನರು, ಶುಭ ದಿನಗಳಲ್ಲಿ 1 ಲಕ್ಷ ಮತ್ತು ಅದಕ್ಕಿಂತ ಹೆಚ್ಚಿನದನ್ನು ದಾಟುತ್ತದೆ.

ಭಗವಾನ್ ಬಾಲಾಜಿಯ ಅನುಯಾಯಿಗಳಾಗಿರುವ ಉದ್ಯಮಿಗಳು ಅವರನ್ನು ತಮ ಉದ್ಯಮಗಳಲ್ಲಿ ಔಪಚಾರಿಕ ಪಾಲುದಾರ ಎಂದು ಘೋಷಿಸುವುದು ಅಸಾಮಾನ್ಯವೇನಲ್ಲ. ನಂತರ ಅವರು ವರ್ಷದ ಕೊನೆಯಲ್ಲಿ ದೇವಾಲಯಕ್ಕೆ ಲಾಭದ ಪಾಲನ್ನು ನೀಡುತ್ತಾರೆ. ಈ ಪದ್ಧತಿಯಿಂದಾಗಿ ದೇಣಿಗೆಗಳು ಹೆಚ್ಚಾಗಬಹುದು

# ಸಚಿವ ರಾಜಣ್ಣ ಅವರಿಗೆ ನೋಟಿಸ್ ನೀಡುವಂತೆ ಕಾಂಗ್ರೆಸ್ ಶಾಸಕರು ಆಗ್ರಹ

**ತುಮಕೂರು,ಜು.3–** ಸೆಪ್ಟೆಂಬರ್ ರಾಜಕೀಯ ಕ್ರಾಂತಿಯ ಬಗ್ಗೆ ಹೇಳಿಕೆ ನೀಡಿ ವಿವಾದದ ಕಿಚ್ಚುಹಚ್ಚಿದ ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರಿಗೂ ಶಿಸ್ತು ಉಲ್ಲಂಘನೆಯ ನೋಟಿಸ್ ನೀಡಬೇಕೆಂದು ಕಾಂಗ್ರೆಸ್ ಶಾಸಕರು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಕುಣಿಗಲ್ ಕ್ಷೇತ್ರದ ಶಾಸಕ ಎಚ್.ಡಿ. ರಂಗನಾಥ್ ಕಾಂಗ್ರೆಸ್?, ಮಂತ್ರಿ ಅಥವಾ ಶಾಸಕರಿಂದ ಬೆಳೆದುಬಂದಿಲ್ಲ. ಕಾರ್ಯಕರ್ತರ ತ್ಯಾಗ, ಬಲಿದಾನಗಳಿಂದ ಈ ಹಂತಕ್ಕೆ ಬಂದಿದೆ. ಅದನ್ನು ಹಾಳು ಮಾಡುವ ಯಾರೇ ಆದರೂ ಅವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂದು ರಾಮನಗರದ ಶಾಸಕ ಇಕ್ಬಾಲ್ ಹುಸೇನ್ ಹೇಳಿಕೆ ನೀಡಿದ್ದಾರೆ. ಅವರಿಗೆ ನೋಟೀಸ್ ನೀಡಲಾಗಿದೆ. ಅದೇ ರೀತಿ ಸಚಿವರು ಹೇಳಿಕೆ ನೀಡಿ ಗೊಂದಲ ಮೂಡಿಸಿದ್ದಾರೆ.

ಪಕ್ಷದಲ್ಲಿ ಒಬ್ಬರಿಗೆ ಒಂದು, ಮತ್ತೊಬ್ಬರಿಗೆ ಇನ್ನೊಂದು ನ್ಯಾಯ ಮಾಡಲು ಸಾಧ್ಯವಿಲ್ಲ. ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಬೇಕೆಂಬ ಅಭಿಲಾಷೆ ನನಗೂ ಇದೆ. ಹೋರಾಟ ಮನೋಭಾವದ ನಮ ಕುಟುಂಬದವರಿಗೆ ಅವಕಾಶ ಸಿಗಬೇಕು. ಈ ಬಗ್ಗೆ ನಮ ಮನದಾಳವನ್ನು ಹೇಳಿಕೊಳ್ಳಲು ಸಮಯಾವಕಾಶ ನೀಡಿ ಎಂದು ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರಲ್ಲಿ ಮನವಿ ಮಾಡಿದ್ದೇನೆ. ಬಹುಶಃ ಸೋಮವಾರ ಭೇಟಿಗೆ ಸಮಯ ಸಿಗಬಹುದು.

ಅಲ್ಲಿ ಚರ್ಚೆ ಮಾಡುತ್ತೆ?ನೆ ಮಾಧ್ಯಮಗಳ ಮುಂದೆ ಹೇಳಿಕೆ ನೀಡುವುದಿಲ್ಲ ಎಂದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾಗಲಿದೆ ಎಂದು ಸಚಿವ ಕೆ.ಎನ್. ರಾಜಣ್ಣ ಸೇರಿದಂತೆ ಹಲವಾರು ಮಂದಿ ಹೇಳುತ್ತಿದ್ದಾರೆ.

# ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆ ನಿಶ್ಚಿತ: ನಿಖಿಲ್



**ಬೀದರ್,ಜು.3–**ರಾಜ್ಯರಾಜಕೀಯದಲ್ಲಿ ಸೆಪ್ಟೆಂಬರ್‌ನಲ್ಲಿ ಕ್ರಾಂತಿಯಾಗುತ್ತದೋ ಇಲ್ಲವೋ ಗೊತ್ತಿಲ್ಲ. ಆದರೆ ಕಾಂಗ್ರೆಸ್‌ನಲ್ಲಂತೂ ರಾಜ ಕೀಯ ಬೆಳವಣಿಗೆಯಾಗುವುದು ನಿಶ್ಚಿತ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ ಹೇಳಿದರು.

ಬೀದರ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರುಗಳೇ ಸೆಪ್ಟೆಂಬರ್‌ನಲ್ಲಿ ಕ್ರಾಂತಿಯಾಗುತ್ತದೆ ಎಂದು ಹೇಳುತ್ತಿದ್ದಾರೆ. ಆ ಕ್ರಾಂತಿಯಾಗುತ್ತದೋ ಇಲ್ಲವೋ ಆದರೆ ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆಗಳು ಆಗುತ್ತದೆ ಕಾದು ನೋಡೋಣ ಎಂದರು.ಕಾಂಗ್ರೆಸ್‌ನಲ್ಲಿ ಹಲವು ಬಣಗಳಿವೆ. ಹಲವು ಬಣಗಳು ಸದ್ದಿಲ್ಲದೆ ಕೆಲಸ ಮಾಡುತ್ತಿವೆ. ಹಾಗಾಗಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ನಾನೇ ಸಿಎಂ ಎಂದೆಲ್ಲ ಮಾತನಾಡುತ್ತಿದ್ದಾರೆ. ಇವೆಲ್ಲ ರಾಜಕೀಯ ಬೆಳವಣಿಗೆಗಳ ಮುನ್ಸೂಚನೆ ಎಂದು ಅವರು ಹೇಳಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡು ಬಹಳ ದಿನವಾಗಿದೆ. ಅನುದಾನ ಸಿಗುತ್ತಿಲ್ಲ ಎಂದು ಕಾಂಗ್ರೆಸ್ ಶಾಸಕರುಗಳೇ ಅಸಹಾಯಕತೆಯಿಂದ ಮಾತನಾಡುತ್ತಿದ್ದಾರೆ. ಈ ಸರ್ಕಾರ ಕಾಲಹರಣ ಸರ್ಕಾರ ಎಂದು ಟೀಕಿಸಿದರು.

# ಅರ್ಜಿ ವಿಲೇವಾರಿ ಕೋಲಾರ ರಾಜ್ಯಕ್ಕೇ ಮೊದಲು

**ಕೋಲಾರ,ಜು,3–**ಅಟಲ್‌ಜೀ ಜನಸ್ನೇಹಿ ಕೇಂದ್ರ (ಎ.ಜೆ.ಎಸ್.ಕೆ) ಯೋಜನೆಯಡಿ ಜಿಲ್ಲೆಯ ನಾಡಕಚೇರಿಗಳಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿದ ಅರ್ಜಿಗಳಲ್ಲಿ ಶೇ 99ರಷ ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ವಿಲೇವಾರಿ ಮಾಡಿ, ಕೋಲಾರ ಜಿಲ್ಲೆ ಮತ್ತೊಮ್ಮೆ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದೆ.

2025ರ ಜೂನ್ ಮಾಹೆಯಲ್ಲಿ ಒಟ್ಟು 20747 ಅರ್ಜಿಗಳನ್ನು ಸಾರ್ವಜನಿಕರಿಂದ ಸ್ವೀಕರಿಸಿ, 20746 ಅರ್ಜಿಗಳ ವಿಲೇವಾರಿ ಮಾಡಿದೆ. ಕೋಲಾರ ಜಿಲ್ಲೆ 7.78 'ಸಿಗ್ಮಾ ಮೌಲ್ಯವನ್ನು (ಅರ್ಜಿಗಳ ವಿಲೇವಾರಿಯಲ್ಲಿನ ವಿಳಂಬ ಪ್ರಮಾಣ) ಪಡೆದಿದೆ. ಗರಿಷ 8.53 ವಿಲೇವಾರಿ ಸೂಚ್ಯಂಕವನ್ನು (ಡಿಸ್ಪೋಸಲ್ ಇಂಡೆಕ್ಸ್) ಗಳಿಸಿದೆ.




ಈ ಕಾರ್ಯ ಸಾಧನೆಗೆ ನಾಡಕಚೇರಿ ಮತ್ತು ಅಟಲ್‌ಜೀ ಜನಸ್ನೇಹಿ ಕೇಂದ್ರದ ಅಧಿಕಾರಿ ಮತ್ತು ಸಿಬ್ಬಂದಿಯ ಸಹಕಾರ, ಕಾರ್ಯತತ್ಪರತೆ ಕಾರಣವಾಗಿದೆ. ಮುಂದಿನ ದಿನಗಳಲ್ಲೂ ಇದೇ ರೀತಿಯ ಕಾರ್ಯಕ್ಷಮತೆಯನ್ನು ನಿರೀಕ್ಷಿಸುತ್ತೇವೆ' ಎಂದು ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ನಿರ್ದೇಶಕರು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರಿಗೆ 'ಅಭಿನಂದನಾ ಪತ್ರ ಕಳುಹಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಕಲಬುರಗಿಯಲ್ಲಿ ಜು. 5 ರಂದು ವನಮಹೋತ್ಸವಕ್ಕೆ ಚಾಲನೆ



**ಕಲಬುರಗಿ,ಜು.2–**ಕಲಬುರಗಿ ನಗರ ಹಾಗೂ ಜಿಲ್ಲೆಯನ್ನು ಹಸಿರೀಕರಣಗೊಳಿಸುವ ಸಲುವಾಗಿ ಬೃಹತ್ ಮಟ್ಟದಲ್ಲಿ ಗಿಡ ನೆಟ್ಟು ಪೋಷಣೆ ಮಾಡುವ 'ವನಮಹೋತ್ಸವ' ಕಾರ್ಯಕ್ರಮಕ್ಕೆ ಈ ತಿಂಗಳ 5ರಂದು ಶನಿವಾರ ಚಾಲನೆ ನೀಡಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹಾಗೂ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಬೆಂಗಳೂರಿನಲ್ಲಿ ಭಾನುವಾರ ನಡೆದ ಸಭೆಯಲ್ಲಿ ಜಂಟಿಯಾಗಿ ಪ್ರಕಟಿಸಿದರು. ಕಲಬುರಗಿ ಜಿಲ್ಲೆಯ ಹಿರಿಯ ಅಧಿಕಾರಿಗಳೊಂದಿಗೆ ವಿಡಿಯೊ ಸಂವಾದ ನಡೆಸಿದ ಸಚಿವದ್ವಯರು ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕರದ ಮಲ್ಲಿಕಾರ್ಜುನ ಖರ್ಗೆ ಅವರು ವನಮಹೋತ್ಸವ ಆಂದೋಲನಕ್ಕೆ ಚಾಲನೆ ನೀಡುವರು ಎಂದು ಹೇಳಿದರು.

ವನಮಹೋತ್ಸವದ ಅಂಗವಾಗಿ ನರೇಗಾ ಕಾರ್ಯಕ್ರಮವಾದ 5000 ಕಿ.ಮೀ ವ್ಯಾಪ್ತಿಯ ರಸ್ತೆಗಳ ಬದಿ ಗಿಡ ನೆಡುವ 'ಹಸಿರುಪಥ' ಹಾಗೂ ಕಲಬುರಗಿ ನಗರ ಹಸಿರೀಕರಣ ಕಾರ್ಯಕ್ರಮವಾದ 'ಮನೆಗೊಂದು ಮರ' ಯೋಜನೆಗಳಡಿ ಜಿಲ್ಲೆಯಲ್ಲಿ ಸಸಿ ಬೆಳೆಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಕಲ್ಯಾಣ ಕರ್ನಾಟಕ ಭಾಗದಲ್ಲಿ ತಾಪಮಾನ ಹೆಚ್ಚಿದ್ದು, ಕಲಬುರಗಿ ಜಿಲ್ಲೆಯಲ್ಲಿ ಗಿಡಗಳನ್ನು ನೆಟ್ಟು ಮರಗಳನ್ನು ಪೋಷಿಸುವದರಿಂದ ಕನಿಷ್ಠ ಒಂದು ಡಿಗ್ರಿ ಸೆಲಸೆಲ್ಸಿಯಸ್ ತಾಪಮಾನವನ್ನಾದರೂ ತಗ್ಗಿಸಲು ಪ್ರಯತ್ನ ಪಡಬೇಕು ಎಂದು ಸಚಿವ ಈಶ್ವರಖಂಡ್ರೆ ಈ ಸಂದರ್ಭದಲ್ಲಿ ಹೇಳಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಸಕ್ತ ವರ್ಷ 25 ಲಕ್ಷ ಸಸಿಗಳನ್ನು ನೆಟ್ಟು ಬೆಳೆಸಲಾಗುವುದು ಎಂದೂ ಅರಣ್ಯ ಸಚಿವರು ತಿಳಿಸಿದರು.

ಕಲಬುರಗಿ ನಗರದಲ್ಲಿ ನಾಲ್ಕು ಕೆರೆಗಳು, ಐದು ಉದ್ಯಾನವನಗಳು, 23ವೃತ್ತಗಳು ಸೇರಿದಂತೆ ಇಡೀ ನಗರವನ್ನು ಮರ ಗಿಡಗಳಿಂದ ಅಭಿವೃದ್ಧಿಪಡಿಸಲು ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಯುವ ಮಾರ್ಗ

ಶುಕ್ರವಾರ : 04-07-2025

## ಹಾಸನದಲ್ಲಿ ನಿಲ್ಲದ ಹೃದಯಾಘಾತ ಸಾವಿನ ಸರಣಿ, ಮೃತರ ಸಂಖ್ಯೆ 31ಕ್ಕೆ ಏರಿಕೆ

**ಹಾಸನ,ಜು.3–**ಜಿಲ್ಲೆಯಲ್ಲಿ ಹೃದಯಾಘಾತ ಸರಣಿ ಸಾವಿನ ಪ್ರಕರಣಗಳು ಸದ್ಯಕ್ಕೆ ನಿಲ್ಲುವ ಲಕ್ಷಣಗಳು ಕಾಣುತ್ತಿಲ್ಲ. ನಿನ್ನೆಯಿಂದ ಮತ್ತೆ ನಾಲ್ವರು ಸಾವನ್ನಪ್ಪಿದ್ದು, ಸಾವಿನ ಸಂಖ್ಯೆ 31 ಕ್ಕೆ ಏರಿಕೆಯಾಗಿದೆ.

ರಾತ್ರಿ ಮಲಗಿದ್ದಲ್ಲೇ ಹೃದಯಾಘಾತದಿಂದ ಗ್ರಾಮ ಪಂಚಾಯಿತಿ ಸದಸ್ಯ ಸಂತೋಷ್ (41) ಮೃತಪಟ್ಟಿರುವ ಘಟನೆ ಆಲೂರು ತಾಲ್ಲೂಕಿನ ಕಲ್ಲಾರೆ ಗ್ರಾಮದಲ್ಲಿ ನಡೆದಿದೆ.ರಾತ್ರಿ ಊಟ ಮಾಡಿ ಮಲಗಿದ್ದು, ಬೆಳಗ್ಗೆ ಮೇಲೆ ಏಳಲೇ ಇಲ್ಲ. ಕೂಡಲೇ ಕುಟುಂಬಸ್ಥರು ಆಸ್ಪತ್ರೆಗೆ ಸಾಗಿಸುವಷ್ಟರಲ್ಲೇ ಮೃತಪಟ್ಟಿದ್ದಾರೆ.

ಸಂತೋಷ್ ಕಾರಗೋಡು ಗ್ರಾಪಂ ಸದಸ್ಯರಾಗಿದ್ದರು. ಮತ್ತೊಂದು ಪ್ರಕರಣದಲ್ಲಿ ನಗರದ ಕರಿಗೌಡ ಕಾಲೋನಿಯ ಸಂಪತ್‌ಕುಮಾರ್ (53) ಎಂಬುವವರಿಗೆ ದಿಢೀರ್ ಎದೆನೋವು ಕಾಣಿಸಿಕೊಂಡಿತ್ತು. ಕೂಡಲೇ ಹಿಂಸ್? ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದರು.

ಮತ್ತೊಂದೆಡೆ ಸಕಲೇಶಪುರ ತಾಲ್ಲೂಕಿನ, ಬೆಳಗೋಡು ಹೋಬಳಿಯ ಚಿಕ್ಕನಾಯಕನ ಹಳ್ಳಿ ಗ್ರಾಮದಲ್ಲಿ ಸಿಬಿ ವಿರೂಪಾಕ್ಷ (70) ಅವರು ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗ್ರಾಮಕ್ಕೆ ವಾಪಸ್ ಬರುತ್ತಿದ್ದಾಗ ವೃದ್ಧೆ ದೇವಮ (72) ಮಾರ್ಗಮಧ್ಯೆ ಹೃದಯಾಘಾತದಿಂದ ಕೊನೆ ಉಸಿರೆಳೆದಿದ್ದಾರೆ.

ಸಕಲೇಶಪುರ ತಾಲ್ಲೂಕಿನ ಅರೆಕೆರೆ ಗ್ರಾಮದ ದೇವಮ ಬೆಂಗಳೂರಿನಲ್ಲಿ ಎದೆ ನೋವಿಗೆ ವೈದ್ಯರ ಸಲಹೆ ಪಡೆದು ವಾಪಸ್ ಗ್ರಾಮಕ್ಕೆ ತೆರಳುತ್ತಿದ್ದಾಗ ಘಟನೆ ನಡೆದಿದೆ.ಒಟ್ಟಿನಲ್ಲಿ ಕಳೆದ 45 ದಿನಗಳಿಂದ ಜಿಲ್ಲೆಯಲ್ಲಿ ಹೃದಯಾಘಾತದಿಂದ ಮೃತಪಟ್ಟವರ ಸಂಖ್ಯೆ 31ಕ್ಕೆ ಏರಿಕೆಯಾಗಿದ್ದು, ಜಿಲ್ಲೆಯ ಜನತೆಯನ್ನು ಬೆಚ್ಚಿ ಬೀಳಿಸಿದೆ.

## ಜುಲೈ 06 ರಂದು ಜಗಜೀವನ ರಾಮ್ ಪುಣ್ಯತಿಥಿ

**ರಾಯಚೂರು,ಜು.3–** ಹಸಿರು ಕಾಂತ್ರಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ ಪುಣ್ಯತಿಥಿ ನಿಮಿತ್ತ ಜುಲೈ 6ರ ಬೆಳಗ್ಗೆ 9 ಗಂಟೆಗೆ ಸ್ಟೇಷನ್ ವೃತ್ತದಲ್ಲಿರುವ ಡಾ.ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ಜಿಲ್ಲಾಧಿಕಾರಿಗಳು ಮಾಲಾರ್ಪಣೆ ಮಾಡಲಿದ್ದಾರೆ. ಈ ಪೂಜಾ ಕಾರ್ಯಕ್ರಮಕ್ಕೆ ಜಿಲ್ಲೆಯ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ಯಶಸ್ವಿಗೊಳಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 5 ರಂದು ಪೂರ್ವಭಾವಿ ಸಭೆ

**ರಾಯಚೂರು,ಜು.3–** ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ರಾಯಚೂರು ನಗರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ವೃತ್ತದ ಅಭಿವೃದ್ಧಿ ಹಾಗೂ ಉನ್ನತೀಕಣ ಕಾಮಗಾರಿಗಳ ಕುರಿತು ಚರ್ಚಿಸಲು ಪೂರ್ವಭಾವಿ ಸಭೆಯು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜುಲೈ 5 ರಂದು ಸಂಜೆ 4 ಗಂಟೆಗೆ ನಡೆಯಲಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಗೆ ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳ ಮುಖಂಡರು, ದಲಿತ ಸಮುದಾಯಗಳ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಎನ್.ಜಿ.ಓ. ಸಂಸ್ಥೆಯವರು ಭಾಗವಹಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ಸರಬರಾಜಿಗೆ ಸೇವೆ ಒದಗಿಸಲು ಅರ್ಜಿ ಆಹ್ವಾನ

**ರಾಯಚೂರು,ಜು.3–** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ರಾಷ್ಟ್ರೀಯ ಆರೋಗ್ಯ ಅಭಿಯಾನದ ವಿವಿಧ ಕಾರ್ಯಾಕ್ರಮಗಳಿಗೆ ಅವಶ್ಯಕವಾದ ಒಟ್ಟು 16 ವಾಹನಗಳು ಜಿಲ್ಲಾ ಮಟ್ಟದ ಕಚೇರಿಗಳಿಗೆ ಹಾಗೂ ತಾಲೂಕು ಮಟ್ಟದಲ್ಲಿ ಆರ್.ಬಿ.ಎಸ್.ಕೆ. ತಂಡಗಳಿಗೆ ವಾಹನಗಳನ್ನು ಸರಬರಾಜು ಮಾಡಲು ಆಯ್ದ ಸಂಸ್ಥೆಗಳಿಂದ ಒಂದು ವರ್ಷದ ಅವಧಿಗೆ ಸೇವೆಯನ್ನು ಒದಗಿಸಲು ಅರ್ಜಿ ಕರೆಯಲಾಗಿದೆ. ದಿನಾಂಕ : 04.07.2025 ರಿಂದ 18.07.2025ರ ಸಂಜೆ 5:30ರೊಳಗೆ ಅರ್ಜಿಗಳನ್ನು ಇ-ಪ್ರಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ, ಡಿ.ಪಿ.ಎಂ.ಯು. ವಿಭಾಗಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನೆ ಮಾಲಿಕನ ಮೇಲೆ ಹಲ್ಲೆ ನಡೆಸಿದ್ದ ಬಿಬಿಎಂಪಿ ಸಿಬ್ಬಂದಿಗಳ ಅಮಾನತು

**ಬೆಂಗಳೂರು, ಜು. 3–** ಒಳ ಮೀಸಲಾತಿ ಸ್ಟಿಕರ್ ಅಳವಡಿಕೆ ಸಂದರ್ಭದಲ್ಲಿ ಮನೆ ಮಾಲಿಕರ ಮೇಲೆ ಹಲ್ಲೆ ನಡೆಸಿದ್ದ ಮೂವರು ಬಿಬಿಎಂಪಿ ಸಿಬ್ಬಂದಿಗಳನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.

ಕಂದಾಯ ವಸೂಲಿಗಾರರಾದ ಸೇಂದಿಲ್ ಕುಮಾರ್, ಪೆದ್ದರಾಜು ಹಾಗೂ ರೆವಿನ್ಯೂ ಇನ್‌ಪೆಕ್ಟರ್ ರಮೇಶ್ ಅಮಾನತುಗೊಂಡ ಬಿಬಿಎಂಪಿ ನೌಕರರಾಗಿದ್ದಾರೆ.

# ಗ್ರಾಮ ಸಹಾಯಕರ ಸಂಘದ ತಾಲೂಕು ಅಧ್ಯಕ್ಷರಾಗಿ ಕರಿಯಪ್ಪ ಆಯ್ಕೆ

**ಯುವ ಮಾರ್ಗ ಸುದ್ದಿ**



**ಅರಕೇರಾ,ಜು.3–** ಕರ್ನಾಟಕ ರಾಜ್ಯ ಕಂದಾಯ ಇಲಾಖೆ ಗ್ರಾಮ ಸಹಾಯಕರ ಸಂಘದ ಅಧ್ಯಕ್ಷರ ಆಯ್ಕೆಗೆ ಬುಧವಾರ ಚುನಾವಣೆ ನಡೆಯಿತು.

ಅಧ್ಯಕ್ಷರಾಗಿ ಅರಕೇರಾ ಗ್ರಾಮ ಸಹಾಯಕ ಕರಿಯಪ್ಪ, ಉಪಾಧ್ಯಕ್ಷರಾಗಿ ಎನ್.ಗಣೇಕಲ್ ಗ್ರಾಮ ಸಹಾಯಕ ಗಂಗಪ್ಪ, ಕಾರ್ಯದರ್ಶಿಯಾಗಿ ಜಾಗೀರ ಜಾಡಲದಿನ್ನಿ ಗ್ರಾಮ ಸಹಾಯಕ ಮೌನೇಶ ಅವಿರೋಧವಾಗಿ ಆಯ್ಕೆಯಾದರು.

ಆಯ್ಕೆಯಾದ ಪದಾಧಿಕಾರಿಗಳಿಗೆ ತಹಸೀಲ್ದಾರ್ ಅಮರೇಶ ಬೀರಾದರ್ ಸನ್ಮಾನಿಸಿದರು.

ಕಂದಾಯ ನಿರೀಕ್ಷಕ ಬಸವರಾಜ ಹೂನುರು ಸೇರಿದಂತೆ ವಿವಿಧ ವೃತ್ತದ ಗ್ರಾಮ ಆಡಳಿತಾಧಿಕಾರಿಗಳು ಇದ್ದರು.

# ಅನುಭವ ಮಂಟಪದಲ್ಲಿ ಡಾ.ಫ.ಗು.ಹಳಕಟ್ಟಿ ಜಯಂತಿ ಆಚರಣೆ

**ಕಲಬುರಗಿ,ಜು.3–**ಮರೆಮಾಚಿ ಹೋಗಿದ್ದ ವಚನ ಸಾಹಿತ್ಯವನ್ನು ಜಗತ್ತಿಗೆ ಪಸರಿಸಿದ್ದು ಹಳಕಟ್ಟೆಯವರು ಅವರು ಎಂದು ಡಾ.ಬಿ.ಡಿ .ಜತ್ತಿ ವಚನ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕರಾದ ಡಾ.ವೀರಣ್ಣ ದಂಡೆ ಹೇಳಿದರು.

ಜಯನಗರದ ಬಸವ ಸಮಿತಿಯ ಅನುಭವ ಮಂಟಪದಲ್ಲಿ ಒಂದು ತಿಂಗಳ ಪರ್ಯಂತ ಜರಗುತ್ತಿರುವ ವಚನ ಆಷಾಡ ಪ್ರವಚನದ ಹತ್ತನೇ ದಿನದಂದು ಮಾತನಾಡಿದ ಅವರು, ಹಳಕಟ್ಟೆಯವರು ಅವರು ವಿಜಾಪುರದಲ್ಲಿ 7 ಗಂಡು ಮಕ್ಕಳ ಶಾಲೆ, ಮೂರು ಹೆಣ್ಣು ಮಕ್ಕಳ ಶಾಲೆ ಪ್ರಾರಂಭಿಸಿ ಕನ್ನಡದ ಕಂಪನ್ನು ಪಸರಿಸಿದರು. ಒಕ್ಕಲಿಗರ ಸಂಘ, ನೇಕಾರರ ಸಂಘ, ಹತ್ತಿ ಬೆಳೆಗಾರರ ಮಾರಾಟಗಾರರ ಸಂಘ, ಗ್ರಾಮೀಣಾಭಿವೃದ್ಧಿ ಸಂಘ ಸ್ಥಾಪಿಸಿದರು. ಬಿಎಲ್‌ಡಿ ಸಂಸ್ಥೆ ಪ್ರಾರಂಭಿಸಿದವರೇ ಹಳಕಟ್ಟಿ ಅವರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಪ್ರಾರಂಭಿಸಿದರು. ಸಿದ್ದೇಶ್ವರ ಬ್ಯಾಂಕ್ ಸ್ಥಾಪಿಸಿದ ಅವರು ಒಬ್ಬ ವ್ಯಕ್ತಿಯಾಗಿರದೆ ಶಕ್ತಿಯಾಗಿದ್ದರು. ಹಳಕಟ್ಟೆಯವರು ವಚನ ಸಂಗ್ರಹಿಸಿ ಪುಸ್ತಕ ಮುದ್ರಣ ಮಾಡಲು ಬಾಷಲ್ ಮಿಷನ್ ಮುದ್ರಣಾಲಯಕ್ಕೆ ಕಳುಹಿಸಿದರೆ ಅವರು ಕ್ರಿಶ್ಚಿಯನ್ ಧರ್ಮಕ್ಕೆ ಕುತ್ತುಬರುತ್ತದೆ ಎಂದು ವಚನ ಸಾಹಿತ್ಯ ಮುದ್ರಿಸದೆ ತಿರಸ್ಕರಿಸಿದರು . ಅವರು ವಚನ ಸಾಹಿತ್ಯ ಬೆಳಗಿಸಿದರು ತಾವು ಕರ್ಪೂರದಂತೆ ಕರಗಿ ಹೋದರು .ಜೈನ ಧರ್ಮದಲ್ಲಿ ಬಹಳಷ್ಟು ಜನ ಧರ್ಮ ಪ್ರಚಾರಕ್ಕೆ ಕೊಡುಗೈದಾನಿಗಳಿದ್ದರು .ಆದರೆ ಲಿಂಗವಂತರಲ್ಲಿ ಇದರ ಕೊರತೆ ಇದೆ .ಹಳಕಟ್ಟಿ ಅವರು ವಕೀಲರಾಗಿ ಮುಂದು ವರೆದರೆ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾಗು ವಷ್ಟು ಸಾಮರ್ಥ್ಯ ಹೊಂದಿದರು. ಆದರೆ ವಚನ ಸಾಹಿತ್ಯಕ್ಕಾಗಿ ತಮ್ಮ ಜೀವನ ಮುಡುಪಾಗಿಟ್ಟರು. ವಿಜಾಪುರಕ್ಕೆ ನೋಡಲು ಬರುವವರು ಗೋಳಗುಮ್ಮಟಕ್ಕಿಂತ ಹಳಕಟ್ಟಿಯವರ ವಚನ ಗುಮ್ಮಟಕ್ಕೆ ಆಕರ್ಷಿತರಾದರು. ತಮ್ಮ ಮನೆಯನ್ನು ಮಾರಿ ಹಿತ ಚಿಂತಕ ಮುದ್ರಣಾಲಯ ಸ್ಥಾಪಿಸಿ ವಚನ ಸಾಹಿತ್ಯ ಪ್ರಕಟಿಸಿದರು ಎಂದು ಹೇಳಿದರು.

ಬೆಳಗಾವಿಯ ಬಸವ ಬೆಳವಿಯ ಚರಂತಿಶ್ವರ ಮಠದ ಶರಣಬಸವ ಸ್ವಾಮಿಗಳು ಮಾತನಾಡುತ್ತ, ಓಲೆ ಮಠಗಳಿವೆ, ಓಲೆ ಮಠಗಳೆಂದರೆ ವಚನದ ಓಲೆ ಸಂಗ್ರಹಿಸಿಟ್ಟಿರುವ ಮಠಗಳಾಗಿವೆ .ಸಂಪಾದನೆ ಮಠಗಳೆಂದಿದ್ದವು .ಸಂಪಾದನೆಯ ಮಠಗಳೆಂದರೆ ವಚನಗಳನ್ನು ಸಂಪಾದನೆ ಮಾಡುವ ಮಠಗಳು . ಶೂನ್ಯ ಸಂಪಾದನೆ ಕೃತಿಗಳಂತಹ ಕೃತಿಗಳನ್ನು ರಚಿಸುವ ಮಠಗಳಾಗಿದ್ದವು . ಹಳಕಟ್ಟಿ ಅವರ ನಂತರ ಧಾರವಾಡದ ಮುರುಗಾ ಮಠದ ಮೃತ್ಯುಂಜಯ



ಸ್ವಾಮಿಗಳು ವಚನ ಪ್ರಕಾಶನ ಕಾರ್ಯ ಮಾಡಿದರು . ವಚನಗಳನ್ನು ಮನೆಗಳಲ್ಲಿ ಜೆಗುಲಿಯ ಮೇಲೆ ಇಟ್ಟು ಪೂಜಿಸುತ್ತಿದ್ದರು ಲಿಂಗ ಪೂಜೆಯ ನಂತರ ಓದುತ್ತಿದ್ದರು. ವಚನಗಳನ್ನು ಗಮಕ ಸಂಗೀತದ ಮೂಲಕ ಹಾಡಿಸುತ್ತಿದ್ದರು ದೊಡ್ಡಾಟ ಸಣ್ಣಾಟ ಬಸವಣ್ಣನ ನಾಟಕಗಳ ಮೂಲಕ ಬಸವಣ್ಣನವರ ಜೀವನ ಸಂದೇಶ ಜನ ತಿಳಿದುಕೊಳ್ಳುವ ಕಾಲವೊಂದು ಇತ್ತು . ಹಳಕಟ್ಟಿ ಅವರು ವಚನ ಸಂಗ್ರಹಿಸಿದ ನಂತರ ಅವುಗಳ ಅಧ್ಯಯನ ಆರಂಭವಾಯಿತು, ಬಸವಲಿಂಗ ಶಾಸ್ತ್ರಿಗಳು ಹಳಕಟ್ಟಿಯವರಿಗೆ ವಚನ ಸಂಗ್ರಹದ ಜವಾಬ್ದಾರಿ ವಹಿಸಿದರು. ಮಂಗಳೂರಿನ ಭಾಷೆಲ್ ಮಿಷನ್ ನವರು ವಚನಗಳ ಮಹತ್ವ ಅರಿತು ಅವುಗಳ ಮುದ್ರಣಕ್ಕೆ ತಿರಸ್ಕರಿಸಿದಾಗ ಹಳಕಟ್ಟಿ ಅವರು ಅದರ ಮಹತ್ವ ಅರಿತು ತಮ್ಮ ಆಸ್ತಿ ಮಾರಿ ಮುದ್ರಣಾಲಯ ಸ್ಥಾಪಿಸಿ ವಚನಗಳನ್ನು ಪ್ರಕಟಿಸಿದರು .ಬಿಜಾಪುರ ಅಭಿವೃದ್ಧಿ ಪಡಿಸಿದ ಪಿತಾಮಹ ಹಳಕಟ್ಟಿಯವರಾಗಿದ್ದಾರೆ .

ಹಳಕಟ್ಟಿ ಅವರ ಮಗ ಸರಕಾರಿ ನೌಕರಿ ಪಡೆದುಕೊಂಡು ಅಪ್ಪನ ಖರ್ಚಿಗೆ ಕಳುಹಿಸಿದ ಹಣದಲ್ಲಿ ವಚನ ಪ್ರಕಟಿಸಿದರು. ಬಂತನಾಳ ಶಿವಯೋಗಿಗಳು, ಹಾನಗಲ್ ಕುಮಾರಸ್ವಾಮಿಗಳು ಹಳಕಟ್ಟಿಯವರಿಗೆ ವಚನ ಸಂಗ್ರಹಕ್ಕೆ ಸಹಕರಿಸಿದರು ಎಂದು ಶರಣಬಸವ ಸ್ವಾಮಿಗಳು ಹೇಳಿದರು.

ಕಲಬುರ್ಗಿ ಬಸವ ಸಮಿತಿಯ ಅಧ್ಯಕ್ಷರಾದ ಡಾ.ವಿಲಾಸ್ವತಿ ಖೂಬಾ, ಡಾ.ವೀರಣ್ಣ ದಂಡೆ, ಡಾ.ಜಯಶ್ರೀ ದಂಡೆ ಕಾರ್ಯದರ್ಶಿಗಳಾದ ಡಾ.ಆನಂದ ಸಿದ್ಧಾಮಣಿ, ಶರಣಗೌಡ ಪಾಟೀಲ್ ಪಾಳ,ಡಾ.ಕೆ.ಎಸ್ ವಾಲಿ, ಡಾ.ಎ. ಎಸ್. ಪಾಟೀಲ್, ಬಂಡಪ್ಪ ಕೇಸುರ್, ಉದ್ದಂಡಯ್ಯ, ನಾಗರಾಜ್ ಪಾಟೀಲ್ ಅವರು ಹಾಜರಿದ್ದರು

# ಮಹಾನಗರ ಪಾಲಿಕೆಯಿಂದ ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.3–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ಭಾರತ ಸರ್ಕಾರದ ಪ್ರಧಾನಮಂತ್ರಿ ಆವಾಸ್ ಯೋಜನೆ (ನಗರ) 2.0 ಯಡಿ ಸರ್ವರಿಗೂ ಸೂರು ಒದಗಿಸುವ ಉದ್ದೇಶದಿಂದ ಪಾಲಿಕೆಯ ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಡಿಯಲ್ಲಿ ಫಲಾನುಭವಿಯು ವಿವಾಹಿತ ಮಹಿಳೆ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿಯಾಗಿರಬೇಕು. ಇವರನ್ನು ಹೊರತುಪಡಿಸಿ ಪುರುಷರಾಗಿದ್ದಲ್ಲಿ ಮಾಜಿ ಯೋಧರು, ವಿಧುರರು, ಅಂಗವಿಕಲರು, ಹಿರಿಯ ನಾಗರೀಕರು, ವಿಚ್ಛೇದಿತರು ಅರ್ಹರಾಗಿರುತ್ತಾರೆ. ಸರ್ಕಾರದ ಯಾವುದೇ ಯೋಜನೆ ಅಥವಾ ಇಲಾಖೆಯಿಂದ ಫಲಾನುಭವಿಯಾದವರು ಮತ್ತೆ ಅರ್ಜಿ ಸಲ್ಲಿಸಬಾರದು.

ದಾಖಲಾತಿಗಳು: ಆಧಾರ್ ಕಾರ್ಡ್ (ಮನೆಯ ಯಜಮಾನಿ/ ಹಾಗೂ ತಂದೆ/ ತಾಯಿ ಮತ್ತು ಪಡಿತರ ಚೀಟಿಯಲ್ಲಿ ಇರುವಂತಹ ಕುಟುಂಬ ಸದಸ್ಯರ ಆಧಾರ್ ಕಾರ್ಡಗಳು), ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು ಹಕ್ಕುಪತ್ರ/ ಕ್ರಯ ಪತ್ರ/ ದಾನ ಪತ್ರ/ ಉಡುಗೊರೆ ಪತ್ರ/ ಖಾತ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಖಾತೆಯ ವಿವರ, ನಿಗಧಿತ ನಮೂನೆ, ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ನೊಂದಿಗೆ ವೆಬ್‌ಸೈಟ್ ವಿಳಾಸ: ಗಖಐಷಣಣಠಿ://ಠಿಟಚಿಥಿ-ಣಡಿಛಚಿಟ.ರಠಿ.ಟಿ ನಲ್ಲಿ ಜುಲೈ 15 ರೊಳಗಾಗಿ ಅರ್ಜಿಸಲ್ಲಿಸಿ, ಅರ್ಜಿಯ ಪ್ರತಿಯನ್ನು ಈ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಅವಧಿ ಮೀರಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಮಹಾನಗರ ಪಾಲಿಕೆ ಆಶ್ರಯ ವಿಭಾಗಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಪಾಲಿಕೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಭ್‌ಮನ್ ಗಿಲ್ ಆಟಕ್ಕೆ ಫಿದಾ ಆದ ಕ್ರಿಕೆಟ್ ದೇವರು ತೆಂಡೂಲ್ಕರ್

**ನವದೆಹಲಿ, ಜು. 3–** ಎಡ್ಜ್ ಬಾಸ್ಟನ್‌ನಲ್ಲಿ ದಾಖಲೆ ಶತಕ ಬಾರಿಸಿರುವ ಭಾರತ ಕ್ರಿಕೆಟ್ ತಂಡದ ನಾಯಕ ಶುಭ್‌ಮನ್? ಗಿಲ್ ಅವರ ಆಟವನ್ನು ಕ್ರಿಕೆಟ್ ದಂತಕತೆ ಸಚಿನ್ ತೆಂಡೂಲ್ಕರ್ ಶ್ಲಾಘಿಸಿದ್ದಾರೆ.

ನಾಯಕ ಗಿಲ್ ಅವರ ಅದ್ಭುತ ಶತಕಕ್ಕಾಗಿ ಸಚಿನ್ ತೆಂಡೂಲ್ಕರ್ ಅವರನ್ನು ಮೆಚ್ಚಿಕೊಂಡರು. ಎಡ್‌ಬಾಸ್ಟನ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ಎರಡನೇ ಟೆಸ್ಟ್‌ನ ಮೊದಲ ದಿನದಂದು ಅವರ ಅದ್ಭುತ ಇನ್ನಿಂಗ್‌ಡ್‌ಗಾಗಿ ಸಚಿನ್ ತೆಂಡೂಲ್ಕರ್ ಅವರು ಆರಂಭಿಕ ಯಶಸ್ವಿ ಜೈಸ್ವಾಲ್ ಮತ್ತು ನಾಯಕ ಶುಭ್‌ಮನ್ ಗಿಲ್ ಅವರನ್ನು ಅಭಿನಂದಿಸಿದ್ದಾರೆ.

ತಂಡದ ಕುಸಿತದ ಹೊರತಾಗಿಯೂ, ಗಿಲ್ ಸಂಯೋಜಿತ, ಅಜೇಯ 114 ರನ್‌ಗಳೊಂದಿಗೆ ಇನ್ನಿಂಗ್ಸ್ ಅನ್ನು ಆಧಾರವಾಗಿಟ್ಟುಕೊಂಡು, ರವೀಂದ್ರ ಜಡೇಜಾ (41) ಅವರೊಂದಿಗೆ ಮುರಿಯದ 99 ರನ್‌ಗಳ ನಿರ್ಣಾಯಕ ಜೊತೆಯಾಟವನ್ನು ನಿರ್ಮಿಸಿ ತಂಡವನ್ನು ಸುಭದ್ರ ಸ್ಥಿತಿಯಲ್ಲಿರಿಸಿದ್ದಾರೆ.

ಅವರ ಆಟದ ಬಗ್ಗೆ ಸಚಿನ್ ಹೀಗೆ ಬರೆದಿದ್ದಾರೆ, ಮೊದಲ ಎಸೆತದಿಂದಲೇ ಅವರ ಸ್ವರವನ್ನು ಹೆಚ್ಚಿಸಿದರು. ಅವರು ಸಕಾರಾತ್ಮಕ, ನಿರ್ಭೀತ ಮತ್ತು ಚುರುಕಾದ ಆಕ್ರಮಣಕಾರಿ. ಎಂದಿನಂತೆ ಕೂಲ್ ಆಗಿದ್ದರು, ಶಾಂತವಾಗಿದ್ದರು,

## ಸಾಲಬಾಧೆಯಿಂದ ಮನನೊಂದ ರೈತ ಹೊಳೆಗೆ ಹಾರಿ ಆತ್ಮಹತ್ಯೆ

**ಮೈಸೂರು,ಜು.3–** ಸಾಲ ಬಾಧೆಯಿಂದ ಮನನೊಂದ ರೈತಯೊಬ್ಬರು ತುಂಬಸೋಗೆ ಸೇತುವೆಯಿಂದ ಹೊಳೆಗೆ ಹಾರಿ ಆತಹತ್ಯೆ ಮಾಡಿಕೊಂಡ ಘಟನೆ ನಡೆದಿದೆ. ತಾಲೂಕಿನ ಮುಳ್ಳೂರು ಗ್ರಾಮ ನಿವಾಸಿ ಗೋವಿಂದನಾಯಕ (50) ಮೃತಪಟ್ಟಿರುವ ವ್ಯಕ್ತಿ.

ಗೋವಿಂದನಾಯಕ ಸುಮಾರು 25 ವರ್ಷಗಳ ಹಿಂದೆ ಹೆಗ್ಗಡಪುರ ಗ್ರಾಮದಲ್ಲಿ ವಾಸವಾಗಿದ್ದು.ಇವರು ಕೆಲಸ ಮುಗಿಸಿಕೊಂಡು ಜಾನುವಾರುಗಳಿಗೆ 8 ಗಂಟೆ ಸಮಯಕ್ಕೆ ಹುಲ್ಲನ್ನು ತರುತ್ತೇನೆ ಎಂದು ಹೇಳಿ ಹೊರಗೆ ಹೋದವರು 11 ಗಂಟೆಯಾದರೂ ಮನೆಗೆ ವಾಪಸ್ಸು ಬಾರದೇ ನಾಪತ್ತೆಯಾಗಿದ್ದರು.

ನೇರವಾಗಿ ತಾಲೂಕಿನ ಸಮೀಪದ ತುಂಬಸೋಗೆ ಗ್ರಾಮದಲ್ಲಿರುವ ಕಬಿನಿ ಜಲಾಶಯದ ಹೊಳೆಯ ಮೇಲೆ ತನ್ನ ಸ್ಕೂಟರ್‌ನಲ್ಲಿ ತುಂಬಸೋಗೆ ಗ್ರಾಮದಲ್ಲಿರುವ ಸೇತುವೆ ಬಳಿ ತೆರಳಿದ ಅವರು, ಸೇತುವೆಯಲ್ಲಿಯೇ ಸ್ಕೂಟರ್ ನಿಲ್ಲಿಸಿ, ಮೇಲಿಂದ ಹೊಳೆಗೆ ಹಾರಿದ್ದರು ಎಂದು ತಿಳಿದುಬಂದಿದೆ. ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮಕೈಗೊಂಡಿದ್ದಾರೆ.

## ಬೈಕ್ ಅಪಘಾತದಲ್ಲಿ ಯೋಗ ಗುರು ವಚನಾನಂದ ಶ್ರೀಗಳ ಸಹೋದರ ಸಾವು





**ಚಿಕ್ಕೋಡಿ,ಜು.3–**ಬೈಕ್ ಅಪಘಾತದಲ್ಲಿ ಯೋಗ ಗುರು ಹಾಗೂ ಹರಿಹರ ಪೀಠದ ಶ್ರೀ ವಚನಾನಂದ ಸ್ವಾಮೀಜಿಯವರ ಸಹೋದರ ಸಾವನ್ನಪಿರುವ ಘಟನೆ ಅಥಣಿ ಸಮೀಪದ ಭರಮೋಕೋಡಿ ಬಳಿ ನಡೆದಿದೆ.ಮೃತರನನ್ನು ಅಶೋಕ್ ಗೌರಗೊಂಡ ಎಂದು ಗುರುತ್ತಿಸಲಾಗಿದೆ.

ಅಥಣಿ ತಾಲೂಕಿನ ತಾಂವಸಿ ಮೂಲದ ಅಶೋಕ್ ತಾಂವಶಿ ಗ್ರಾಮದಿಂದ ಅಥಣಿ ಕಡೆಗೆ ಸಾಗುವಾಗ ಭರಮೋ ಕೋಡಿ ಬಳಿ ಈ ಅಪಘಾತ ಸಂಭವಿಸಿದೆ. ನಾಯಿ ಅಡ್ಡ ಬಂದಿದ್ದರಿಂದ ನಿಯಂತ್ರಣ ತಪ್ಪಿ ಬೈಕ್‌ನಿಂದ ಕೆಳಗೆ ಬಿದ್ದು ಸ್ಥಳದಲ್ಲೆ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ

ಅಶೋಕ್ ಅವರು ತಾಯಿ ಹೆಂಡತಿ ಹಾಗೂ ಮೂರು ಹೆಣ್ಣು ಮಕ್ಕಳನ್ನು ಅಗಲಿದ್ದಾರೆ. ಸಾಮಾಜಿಕ ಕಳಕಳಿಯ ಮೂಲಕ ಎಲ್ಲರ ಮನ ಗೆದ್ದು, ಲಕ್ಷಾಂತರ ಸಂಖ್ಯೆಯ ಅಭಿಮಾನಿ ಬಳಗ ಹೋದಿದ್ದರು ಎಂದು ಗ್ರಾಮಸ್ಥರು ಕಂಬನಿ ಮಡಿದಿದ್ದಾರೆ. ಸ್ವಗ್ರಾಮ ತಾವಂಶಿಯಲ್ಲಿ ಅವರ ಅಂತ್ಯಕ್ರಿಯ ನಡೆಯಲಿದೆ ಎಂದು ಮೂಲಗಳು ತಿಳಿಸಿದೆ.

## ವಿವಿಧ ಹುದ್ದೆಗಳ ನೇಮಕಾತಿಗೆ ಜುಲೈ 4ರಂದು ನೇರ ಸಂದರ್ಶನ

**ರಾಯಚೂರು,ಜು.3–**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ 2025-26ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜುಲೈ 04 ರಂದು ನೇರ ಸಂದರ್ಶನದ ಅರ್ಜಿ ಆಹ್ವಾನಿಸಲಾಗಿದೆ.

**ಹುದ್ದೆಗಳ ವಿವರ :** ಸ್ತ್ರೀ ರೋಗ ತಜ್ಞರು-01 ಹುದ್ದೆ, ಮಕ್ಕಳ ತಜ್ಞರು-02 ಹುದ್ದೆ, ನೇತ್ರ ತಜ್ಞರು-01 ಹುದ್ದೆ, ಕಿವಿ ಮೂಗು ಗಂಟಲು ತಜ್ಞರು-02, ಎನ್.ಪಿ.ಪಿ.ಸಿ.ಡಿ., ಎಂ.ಬಿ.ಬಿ.ಎಸ್. ಎಸ್.ಎನ್.ಸಿ.ಯು. ವಿಭಾಗ-02 ಹುದ್ದೆಗಳು, ಎಂ.ಬಿ.ಬಿ.ಎಸ್. ಹೆಚ್.ಡಿ.ಯು. ವಿಭಾಗ-03, ಎಂ.ಬಿ.ಬಿ.ಎಸ್. ಐ.ಸಿ.ಯು./ಹೆಚ್.ಡಿ.ಯು.-06 ಹುದ್ದೆ, ಎಂ.ಬಿ.ಬಿ.ಎಸ್. ಎನ್.ಟಿ.ಇ.ಪಿ.-02 ಹುದ್ದೆ ಸೇರಿದಂತೆ ಒಟ್ಟು-19 ಹುದ್ದೆಗಳಿಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಗೆ ಜುಲೈ 04ರ ಬೆಳಿಗೆ 10.30ಕ್ಕೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ.

ಈ ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯ ರಾಯಚೂರು ಇಲ್ಲಿಗೆ ಕಚೇರಿಯ ಅವಧಿಯಲ್ಲಿ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದು. ಅಥವಾ ದೂರವಾಣಿ ಸಂಖ್ಯೆ: 9449843121 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**